ಶನಿವಾರ, 20.12.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 118
Digital Varthe Kannada Daily
Volume 01 - Issue 118
Saturday 20.12.2025
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡ ದಿನಪತ್ರಿಕೆ
ಕನ್ನಡಿಗರ ಶಕ್ತಿ
DIGITAL VARTHE
digitalvarthe@gmail.com
www.digitalvarthe.com

## ಭೀಕರ ಅಪಘಾತ: ಡಿಕೆಶಿ ಪಿಎಸ್ ಕಾರು ಡಿಕ್ಕಿ , ಬೈಕ್ ಸವಾರ ಸಾವು




**ಬೆಳಗಾವಿ**: ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಆಪ್ತ ಖಾಸಗಿ ಕಾರ್ಯದರ್ಶಿ ಹಾಗೂ ಹಿರಿಯ ಕೆಎಎಸ್ ಅಧಿಕಾರಿ ರಾಜೇಂದ್ರ ಪ್ರಸಾದ್ ಪ್ರಯಾಣಿಸುತ್ತಿದ್ದ ಕಾರು ಭೀಕರ ಅಪಘಾತಕ್ಕೀಡಾಗಿದ್ದು, ಘಟನೆಯಲ್ಲಿ ಒಬ್ಬ ಬೈಕ್ ಸವಾರರು ಸಾವನ್ನಪ್ಪಿದ್ದಾರೆ.

ಈ ದುರಂತ ಬೆಳಗಾವಿ ಜಿಲ್ಲೆಯ ಸವದತ್ತಿ ಪಟ್ಟಣ ಹೊರವಲಯದಲ್ಲಿ ನಡೆದಿದೆ. ಮೃತ ಬೈಕ್ ಸವಾರನನ್ನು ಮಂಜುನಾಥ್ ಬೈರ್ನಟ್ಟಿ (30) ಎಂದು ಗುರುತಿಸಲಾಗಿದೆ. ಅವರು ಸವದತ್ತಿ ಪಟ್ಟಣದ ನಿವಾಸಿಯಾಗಿದ್ದು, ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರ ಒಡೆತನದ ಹರ್ಷಾ ಸಕ್ಕರೆ ಕಾರ್ಖಾನೆಗೆ ಕೆಲಸಕ್ಕೆ ತೆರಳುತ್ತಿದ್ದ ವೇಳೆ ಈ ದುರ್ಘಟನೆ ನಡೆದಿದೆ. ಯಲ್ಲಮ್ಮನ ದರ್ಶನ ಪಡೆದು ವಾಪಸ್ ಆಗುವಾಗ ಅಪಘಾತ ಡಿಸಿಎಂ ಡಿಕೆಶಿ ಅವರ ಖಾಸಗಿ ಕಾರ್ಯದರ್ಶಿ ರಾಜೇಂದ್ರ ಪ್ರಸಾದ್ ಅವರು ಸವದತ್ತಿಯ ಪ್ರಸಿದ್ಧ ರೇಣುಕಾ ಯಲ್ಲಮ್ಮನ ದರ್ಶನ ಪಡೆದು ವಾಪಸ್ ಆಗುತ್ತಿದ್ದಾಗ ಈ ಅಪಘಾತ ಸಂಭವಿಸಿದೆ. ಸವದತ್ತಿ ಪಟ್ಟಣದ ಹೊರವಲಯದ ರಸ್ತೆಯಲ್ಲಿ ಕಾರು ಮತ್ತು ಬೈಕ್ ನಡುವೆ ಭೀಕರ ಡಿಕ್ಕಿ ಸಂಭವಿಸಿದ್ದು, ಡಿಕ್ಕಿಯ ರಭಸಕ್ಕೆ ಕಾರು ಪಲ್ಟಿಯಾಗಿ ರುವುದಾಗಿ ತಿಳಿದುಬಂದಿದೆ.

ಕಾರು ಬೈಕ್‌ಗೆ ಡಿಕ್ಕಿ ಹೊಡೆದ ಪರಿಣಾಮ ಮಂಜುನಾಥ್ ಅವರ ತಲೆಗೆ ತೀವ್ರ ಪೆಟ್ಟು ಬಿದ್ದು, ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ರಾಜೇಂದ್ರ ಪ್ರಸಾದ್ ಹಾಗೂ ಚಾಲಕನಿಗೂ ಗಾಯ ಅಪಘಾತದಲ್ಲಿ ಕಾರಿನಲ್ಲಿ ಪ್ರಯಾಣಿಸುತ್ತಿದ್ದ ರಾಜೇಂದ್ರ ಪ್ರಸಾದ್ ಹಾಗೂ ಕಾರು ಚಾಲಕನಿಗೂ ಗಾಯಗಳಾಗಿವೆ. ತಕ್ಷಣ ಅವರನ್ನು ಸ್ಥಳೀಯರು ರಕ್ಷಿಸಿ, ಹೆಚ್ಚಿನ ಚಿಕಿತ್ಸೆಗಾಗಿ ಧಾರವಾಡದ ಆಸ್ಪತ್ರೆಗೆ ಶಿಫ್ಟ್ ಮಾಡಲಾಗಿದೆ. ಗಾಯಾಳುಗಳ ಸ್ಥಿತಿ ಸ್ಥಿರವಾಗಿದೆ ಎನ್ನಲಾಗಿದೆ

## ರೌಡಿಶೀಟರ್ ಬಿಕ್ಲು ಶಿವ ಕೊಲೆ ಪ್ರಕರಣ: ಶಾಸಕ ಬೈರತಿ ಬಸವರಾಜ್‌ಗೆ ಮತ್ತೆ ಸಂಕಷ್ಟ





ರೌಡಿಶೀಟರ್ ಬಿಕ್ಲು ಶಿವ ಕೊಲೆ ಪ್ರಕರಣದಲ್ಲಿ ಕಾಂಗ್ರೆಸ್ ಶಾಸಕ ಬೈರತಿ ಬಸವರಾಜ್ ಅವರಿಗೆ ಕರ್ನಾಟಕ ಹೈಕೋರ್ಟ್‌ನಿಂದ ದೊಡ್ಡ ಹಿನ್ನಡೆ ಎದುರಾಗಿದೆ. ನಿರೀಕ್ಷಣಾ ಜಾಮೀನು ಕೋರಿ ಸಲ್ಲಿಸಿದ್ದ ಅರ್ಜಿಯನ್ನು ಹೈಕೋರ್ಟ್ ವಜಾಗೊಳಿಸಿದ್ದು, ಯಾವ ಕ್ಷಣದಲ್ಲಾದರೂ ಬಂಧನಕ್ಕೆ ಒಳಗಾಗಬಹುದು ಎಂಬ ಭೀತಿಯಲ್ಲಿ ಶಾಸಕರು ಇದ್ದಾರೆ. ನ್ಯಾಯಮೂರ್ತಿ ಸುನಿಲ್ ದತ್ತ್ ಯಾದವ್ ಅವರ ಏಕಸದಸ್ಯ ಪೀಠ ಅರ್ಜಿಯ ವಿಚಾರಣೆ ನಡೆಸಿ, ಬೈರತಿ ಬಸವರಾಜ್ ಅವರಿಗೆ ನಿರೀಕ್ಷಣಾ ಜಾಮೀನು ನೀಡಲು ನಿರಾಕರಿಸಿ ಆದೇಶ ಹೊರಡಿಸಿದೆ. ವಿಚಾರಣೆಯ ಸಂದರ್ಭದಲ್ಲಿ ಸುಳ್ಳು ಮಾಹಿತಿ ನೀಡಿದ ಆರೋಪದಡಿ ಕ್ರಿಮಿನಲ್ ಪ್ರಾಸಿಕ್ಯೂಷನ್ ಆಫ್ ಕಂಡಕ್ಟ್ ಆಫ್ ಪಬ್ಲಿಕ್ ಸರ್ವೆಂಟ್ಸ್ (ಕೋಕಾ) ಕಾಯ್ದೆ ಅನ್ವಯಿಸುವುದಿಲ್ಲ ಎಂದು ನ್ಯಾಯಾಲಯ ಸ್ಪಷ್ಟಪಡಿಸಿದೆ.

ಆದರೆ, ಈ ಆರೋಪದಡಿ ಬಂಧನದ ಅಪಾಯವಿದ್ದು, ನಿರೀಕ್ಷಣಾ ಜಾಮೀನು ನೀಡುವುದು ಸೂಕ್ತವಲ್ಲ ಎಂದು ಪೀಠ ಅಭಿಪ್ರಾಯಪಟ್ಟಿದೆ. ಬದಲಿಗೆ, ವಿಚಾರಣಾ ನ್ಯಾಯಾಲಯದಲ್ಲೇ ಸೂಕ್ತ ಅರ್ಜಿ ಸಲ್ಲಿಸುವಂತೆ ಶಾಸಕರಿಗೆ ಸೂಚನೆ ನೀಡಲಾಗಿದೆ. ಈ ತೀರ್ಪಿನಿಂದ ಬೈರತಿ ಬಸವರಾಜ್ ಅವರ ಸಂಕಷ್ಟ ಮುಂದುವರಿದಿದ್ದು, ಸಿಐಡಿ ಪೊಲೀಸರು ಯಾವಾಗ ಬೇಕಾದರೂ ಬಂಧಿಸಬಹುದು ಎಂಬ ಆತಂಕವಿದೆ. ಪ್ರಕರಣದಲ್ಲಿ ಸಿಐಡಿ ತನಿಖೆ ತೀವ್ರಗೊಂಡಿದ್ದು, ಶಾಸಕರ ಬಂಧನ ಸಾಧ್ಯತೆಯ ಬಗ್ಗೆ ರಾಜಕೀಯ ವಲಯದಲ್ಲಿ ಚರ್ಚೆಯಾಗುತ್ತಿದೆ. ರೌಡಿಶೀಟರ್ ಬಿಕ್ಲು ಶಿವ ಕೊಲೆ ಪ್ರಕರಣದಲ್ಲಿ ಬೈರತಿ ಬಸವರಾಜ್ ಅವರ ಹೆಸರು ಎಳೆಯಲ್ಪಟ್ಟಿದೆ. ಈ ಪ್ರಕರಣದ ವಿಚಾರಣೆಯ ಸಂದರ್ಭದಲ್ಲಿ ಸುಳ್ಳು ಮಾಹಿತಿ ನೀಡಿದ ಆರೋಪದಡಿ ಕೋಕಾ ಕಾಯ್ದೆಯಡಿ ಪ್ರಕರಣ ದಾಖಲಾಗಿತ್ತು. ಶಾಸಕರು ಈ ಆರೋಪದಿಂದ ರಕ್ಷಣೆ ಕೋರಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ಆದರೆ ನ್ಯಾಯಾಲಯ ಕೋಕಾ ಕಾಯ್ದೆಯಡಿ ಆರೋಪ ಅನ್ವಯಿಸದಿದ್ದರೂ, ಬಂಧನದ ಅಪಾಯವನ್ನು ತಳ್ಳಿಹಾಕದೇ ನಿರೀಕ್ಷಣಾ ಜಾಮೀನು ನಿರಾಕರಿಸಿದೆ. ಬಿಕ್ಲು ಶಿವ ಕೊಲೆ ಪ್ರಕರಣವು ರಾಜ್ಯದಲ್ಲಿ ದೊಡ್ಡ ಸುದ್ದಿಯಾಗಿತ್ತು. ಈ ಪ್ರಕರಣದಲ್ಲಿ ಹಲವು ರಾಜಕೀಯ ನಾಯಕರ ಹೆಸರುಗಳು ಎಳೆಯಲ್ಪಟ್ಟಿದ್ದು, ಸಿಐಡಿ ತನಿಖೆಯು ತೀವ್ರಗೊಂಡಿದೆ. ಬೈರತಿ ಬಸವರಾಜ್ ಅವರು ಕಾಂಗ್ರೆಸ್‌ನ ಪ್ರಮುಖ ನಾಯಕರಲ್ಲೊಬ್ಬರು ಆಗಿದ್ದು, ಈ ಪ್ರಕರಣದಿಂದ ಪಕ್ಷಕ್ಕೂ ಮುಜುಗರ ಉಂಟಾಗುವ ಸಾಧ್ಯತೆಯಿದೆ. ಹೈಕೋರ್ಟ್ ತೀರ್ಪಿನ ನಂತರ ಶಾಸಕರು ವಿಚಾರಣಾ ನ್ಯಾಯಾಲಯದಲ್ಲಿ ಮತ್ತೆ ಅರ್ಜಿ ಸಲ್ಲಿಸಬೇಕಾಗಿದೆ. ಆದರೆ, ಸಿಐಡಿ ಪೊಲೀಸರು ಬಂಧನಕ್ಕೆ ಮುಂದಾಗಬಹುದು ಎಂಬ ಚರ್ಚೆಯಿದೆ. ರಾಜಕೀಯ ವಲಯದಲ್ಲಿ ಈ ತೀರ್ಪು ದೊಡ್ಡ ಚರ್ಚೆಗೆ ಕಾರಣವಾಗಿದ್ದು, ಬೈರತಿ ಬಸವರಾಜ್ ಅವರ ರಾಜಕೀಯ ಭವಿಷ್ಯಕ್ಕೂ ಪ್ರಶ್ನೆಗಳು ಎದುರಾಗಿವೆ. ಕಾನೂನು ತಜ್ಞರು ಈ ತೀರ್ಪನ್ನು ಸಾಮಾನ್ಯವೆಂದು ಭಾವಿಸಿದ್ದಾರೆ. "ಕೋಕಾ ಕಾಯ್ದೆ ಅನ್ವಯಿಸದಿದ್ದರೂ, ಇತರ ಆರೋಪಗಳಡಿ ಬಂಧನದ ಅಪಾಯವಿದ್ದರೆ ನಿರೀಕ್ಷಣಾ ಜಾಮೀನು ನೀಡುವುದು ಕಷ್ಟ" ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ. ಪ್ರಕರಣದ ಮುಂದಿನ ಬೆಳವಣಿಗೆಗಳು ರಾಜ್ಯ ರಾಜಕಾರಣದಲ್ಲಿ ಮಹತ್ವದ ಪಾತ್ರ ವಹಿಸಲಿವೆ. ಬೈರತಿ ಬಸವರಾಜ್ ಅವರು ಈ ಸಂಕಷ್ಟದಿಂದ ಹೇಗೆ ಹೊರಬರಲಿದ್ದಾರೆ ಎಂಬುದನ್ನು ಕಾದು ನೋಡಬೇಕಿದೆ

## ರಿಕ್ಕಿ ಕೇಜ್ ಮನೆಗೆ ಕಳ್ಳತನ: 700 ರೂಪಾಯಿಗೆ ವಸ್ತು ಮಾರಾಟ, ಆರೋಪಿ ಅರೆಸ್ಟ್

**ಬೆಂಗಳೂರು**: ಖ್ಯಾತ ಗ್ರ್ಯಾಮಿ ಪ್ರಶಸ್ತಿ ಪುರಸ್ಕೃತ ಸಂಗೀತ ನಿರ್ದೇಶಕ ರಿಕ್ಕಿ ಕೇಜ್ ಅವರ ಬೆಂಗಳೂರಿನ ನಿವಾಸದಲ್ಲಿ ನಡೆದ ಕಳ್ಳತನ ಪ್ರಕರಣವನ್ನು ಇಂದಿರಾನಗರ ಪೊಲೀಸರು ಭೇದಿಸಿದ್ದಾರೆ. ಮನೆ ಮುಂಭಾಗದಲ್ಲಿದ್ದ ಸಂಪ್‌ನ ಕಬ್ಬಿಣದ ಮುಚ್ಚಳವನ್ನು ಕಳ್ಳತನ ಮಾಡಿ ಕೇವಲ 700 ರೂಪಾಯಿಗೆ ಮಾರಾಟ ಮಾಡಿದ ಆರೋಪಿಯನ್ನು ಪೊಲೀಸರು ಬಂಧಿಸಿದ್ದಾರೆ.



ಈ ಪ್ರಕರಣದಲ್ಲಿ ಮತ್ತೊಬ್ಬ ಆರೋಪಿ ಭಾಗಿಯಾಗಿರುವುದು ಪತ್ತೆಯಾಗಿದ್ದು, ಆತನಿಗಾಗಿ ಪೊಲೀಸರು ಶೋಧ ಕಾರ್ಯ ಆರಂಭಿಸಿದ್ದಾರೆ. ಮನೆ ಖಾಲಿ ಇದ್ದ ಸಂದರ್ಭದಲ್ಲೇ ಕೃತ್ಯ ಇತ್ತೀಚೆಗೆ ರಿಕ್ಕಿ ಕೇಜ್ ಹಾಗೂ ಅವರ ಕುಟುಂಬ ಸದಸ್ಯರು ಮನೆಯಲ್ಲಿ ಇಲ್ಲದ ಸಮಯವನ್ನು ಗಮನಿಸಿದ ಆರೋಪಿಗಳು ಕಳ್ಳತನಕ್ಕೆ ಮುಂದಾಗಿದ್ದಾರೆ. ಸಂಜೆ ವೇಳೆ ಹೆಲ್ಮೆಟ್ ಧರಿಸಿ ಡೆಲಿವರಿ ಸಿಬ್ಬಂದಿಯಂತೆ ನಟಿಸಿ ಮನೆಗೆ ಆಗಮಿಸಿದ ಆರೋಪಿ, ನೇರವಾಗಿ ಮನೆಯ ಮುಂಭಾಗದಲ್ಲಿದ್ದ ಸಂಪ್‌ನ ಕಬ್ಬಿಣದ ಮುಚ್ಚಳವನ್ನು ಎತ್ತಿಕೊಂಡು ಪರಾರಿಯಾಗಿದ್ದಾನೆ. ಯಾವುದೇ ಸಂಶಯ ಬಾರದಂತೆ ವರ್ತಿಸಿದ್ದ ಈ ಆರೋಪಿ ಕೆಲವೇ ನಿಮಿಷಗಳಲ್ಲಿ ಕೃತ್ಯ ಎಸಗಿರುವುದು ಸಿಸಿಟಿವಿಯಲ್ಲಿ ದಾಖಲಾಗಿದೆ. ರಿಕ್ಕಿ ಕೇಜ್ ಮನೆಯ ಹೊರಭಾಗದಲ್ಲಿ ಅಳವಡಿಸಲಾಗಿದ್ದ ಸಿಸಿಟಿವಿ ಕ್ಯಾಮರಾಗಳಲ್ಲಿ ಕಳ್ಳತನದ ದೃಶ್ಯ ಸೆರೆಯಾಗಿತ್ತು. ಈ ದೃಶ್ಯಾವಳಿಗಳನ್ನು ಪರಿಶೀಲಿಸಿದ ಪೊಲೀಸರು ಆರೋಪಿಯ ಚಲನವಲನ, ವೇಷಭೂಷಣ ಮತ್ತು ವಾಹನದ ಮಾಹಿತಿ ಸಂಗ್ರಹಿಸಿದರು.

ಇದೇ ಸಿಸಿಟಿವಿ ದೃಶ್ಯಗಳು ಪ್ರಕರಣ ಭೇದಿಸಲು ಪ್ರಮುಖ ಸಾಕ್ಷ್ಯವಾಗಿವೆ. ಗುಜರಿ ಕೆಲಸ ಮಾಡಿಕೊಂಡಿದ್ದ ಆರೋಪಿ ಬಂಧಿತ ಆರೋಪಿಯನ್ನು ಶಿವಕುಮಾರ್ ಎಂದು ಗುರುತಿಸಲಾಗಿದೆ. ಆತ ಗುಜರಿ (ಸ್ಕ್ರಾಪ್) ಕೆಲಸ ಮಾಡಿಕೊಂಡಿದ್ದು, ಈ ಹಿಂದೆ ಕೂಡ ವಿವಿಧ ಪ್ರದೇಶಗಳಿಂದ ಕಬ್ಬಿಣ, ಲೋಹದ ವಸ್ತುಗಳನ್ನು ಕದ್ದು ಮಾರಾಟ ಮಾಡುತ್ತಿದ್ದನೆಂಬ ಮಾಹಿತಿ ಪೊಲೀಸರಿಗೆ ಲಭ್ಯವಾಗಿದೆ. ಇದೇ ಉದ್ದೇಶದಿಂದ ರಿಕ್ಕಿ ಕೇಜ್ ಮನೆಯ ಸಂಪ್ ಮುಚ್ಚಳವನ್ನು ಕದ್ದು 700 ರೂಪಾಯಿಗೆ ಮಾರಾಟ ಮಾಡಿದ್ದಾನೆ ಎಂದು ವಿಚಾರಣೆಯಲ್ಲಿ ಒಪ್ಪಿಕೊಂಡಿದ್ದಾನೆ. ಇನ್ನೊಬ್ಬ ಆರೋಪಿಗಾಗಿ ಶೋಧ ಈ ಕಳ್ಳತನ ಪ್ರಕರಣದಲ್ಲಿ ಶಿವಕುಮಾರ್ ಒಬ್ಬನೇ ಅಲ್ಲ, ಮತ್ತೊಬ್ಬ ಆರೋಪಿ ಸಹ ಭಾಗಿಯಾಗಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

ಇಬ್ಬರೂ ಸೇರಿ ಯೋಜಿತವಾಗಿ ಕೃತ್ಯ ಎಸಗಿರುವುದು ತನಿಖೆಯಲ್ಲಿ ಬೆಳಕಿಗೆ ಬಂದಿದೆ. ಪರಾರಿಯಾಗಿರುವ ಆರೋಪಿಯನ್ನು ಪತ್ತೆ ಹಚ್ಚಲು ಪೊಲೀಸರು ವಿಶೇಷ ತಂಡ ರಚಿಸಿ ಶೋಧ ಕಾರ್ಯ ಮುಂದುವರಿಸಿದ್ದಾರೆ. ಎಕ್ಸ್ ಖಾತೆಯಲ್ಲಿ ರಿಕ್ಕಿ ಕೇಜ್ ಪ್ರತಿಕ್ರಿಯೆ ಕಳ್ಳತನ ನಡೆದ ಬಳಿಕ ರಿಕ್ಕಿ ಕೇಜ್ ಅವರು ತಮ್ಮ ಎಕ್ಸ್ (ಹಳೆಯ ಟ್ವಿಟರ್) ಖಾತೆಯಲ್ಲಿ ಈ ಘಟನೆಯ ಕುರಿತು ಮಾಹಿತಿ ಹಂಚಿಕೊಂಡಿದ್ದರು. ರಿಕ್ಕಿ ಕೇಜ್ ನೀಡಿದ ದೂರಿನ ಮೇರೆಗೆ ಇಂದಿರಾನಗರ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಲಾಗಿತ್ತು. ಸಿಸಿಟಿವಿ ದೃಶ್ಯಗಳು, ಸ್ಥಳ ಪರಿಶೀಲನೆ ಮತ್ತು ಗುಪ್ತ ಮಾಹಿತಿಯ ಆಧಾರದ ಮೇಲೆ ಪೊಲೀಸರು ಆರೋಪಿಯನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

## ಹಿಂದೂ ವ್ಯಕ್ತಿಯ ಗುಂಪುಹತ್ಯೆ ಖಂಡಿಸಿದ ಯೂನಸ್ ಸರ್ಕಾರ

**ಢಾಕಾ:** ವಿದ್ಯಾರ್ಥಿ ನಾಯಕ ಷರೀಫ್ ಉಸ್ಮಾನ್ ಹಾದಿ ಸಾವಿನ ಬಳಿಕ ಬಾಂಗ್ಲಾದೇಶದಲ್ಲಿ ಜಧಾನಿ ಢಾಕಾದಲ್ಲಿ ನಡೆಯುತ್ತಿರುವ ಪ್ರತಿಭಟನೆ ಹೊಸ ಸಂಘರ್ಷಗಳಿಗೆ ದಾರಿ ಮಾಡಿಕೊಟ್ಟಿದೆ. ಇದರ ನಡುವೆ ಧರ್ಮನಿಂದನೆ ಆರೋಪ ಹೊತ್ತಿದ್ದ ಹಿಂದೂ ವ್ಯಕ್ತಿಯೊಬ್ಬನನ್ನ ಥಳಿಸಿ ಹತ್ಯೆ ಮಾಡಿರುವುದನ್ನ ಮೊಹಮ್ಮದ್ ಯೂನಸ್ ನೇತೃತ್ವದ ಸರ್ಕಾರ ಖಂಡಿಸಿದೆ. ನವ ಬಾಂಗ್ಲಾದೇಶದಲ್ಲಿ ಅಂತಹ ಹಿಂಸಾಚಾರಕ್ಕೆ ಎಂದಿಗೂ ಜಾಗವಿಲ್ಲ. ಈ ಕ್ರೂರ ಅಪರಾಧದಲ್ಲಿ ಭಾಗಿಯಾಗಿರುವ ಯಾರಿಗೂ ವಿನಾಯಿತಿ ಕೊಡಲ್ಲ. ಕೃತ್ಯದಲ್ಲಿ ಭಾಗಿಯಾಗಿರುವ ಯಾರನ್ನೂ ಸುಮ್ಮನೆ ಬಿಡಲ್ಲ ಎಂದು ಶಪಥ ಮಾಡಿದೆ. ಹತ್ಯೆಯಾದ ಹಿಂದೂ ಮುಖಂಡ ದೀಪು ಚಂದ್ರ ದಾಸ್ ಢಾಕಾದ ದುಬಾಲಿಯಾ ಪ್ಯಾರಾ ಪ್ರದೇಶದಲ್ಲಿ ಬಾಡಿಗೆ ಮನೆಯಲ್ಲಿ ವಾಸಿಸುತ್ತಿದ್ದ. ಗಾರ್ಮೆಂಟ್ ಕಾರ್ಖಾನೆಯಲ್ಲಿ ಕೆಲಸ ಮಾಡಿಕೊಂಡಿದ್ದ.



ಆದ್ರೆ ಗುರುವಾರ ತಡರಾತ್ರಿ ಚಂದ್ರದಾಸ್ ಪ್ರವಾದಿ ಮೊಹಮ್ಮದ್ ಕುರಿತು ಅವಹೇಳನಕಾರಿ ಹೇಳಿಕೆ ನೀಡಿದ್ದನೆಂದು ಆರೋಪಿಸಿ ಸ್ಥಳೀಯ ನಿವಾಸಿಗಳ ಗುಂಪು ಥಳಿಸಿದ್ದು, ವ್ಯಕ್ತಿ ಸಾವನ್ನಪ್ಪಿದ್ದಾನೆ. ಭಯೋತ್ಪಾದಕ ಗುಂ 30 ಪತ್ರಕರ್ತರ ರಕ್ಷಣೆ ಇನ್ನೂ ಉಸ್ಮಾನ್ ಹಾದಿ ಸಾವು ಖಂಡಿಸಿ ನಡೆಯುತ್ತಿದ್ದ ಹಿಂಸಾತ್ಮಕ ಪ್ರತಿಭಟನೆ ವೇಳೆ ಸಂಕಷ್ಟಕ್ಕೆ ಸಿಲುಕಿದ್ದ 30 ಬಾಂಗ್ಲಾದೇಶಿ ಪತ್ರಕರ್ತರನ್ನ ರಕ್ಷಣೆ ಮಾಡಲಾಗಿದೆ.

ಪ್ರತಿಭಟನಾಕಾರರು ಮೊದಲು ಪ್ರಥಮ್ ಅಲೋ (ದೇಶದ ಅತಿದೊಡ್ಡ ಬಂಗಾಳಿ ಪತ್ರಿಕೆ) ಪತ್ರಿಕಾ ಕಚೇರಿ ಮೇಲೆ ದಾಳಿ ನಡೆಸಿದ್ದರು. ಕಟ್ಟಡದ ಹಲವು ಮಹಡಿಗಳನ್ನ ಧ್ವಂಸಗೊಳಿಸಿ, ಪೀಠೋಪಕರಣ ಹಾಗೂ ದಾಖಲೆಗಳಿಗೆ ಬೆಂಕಿ ಹಚ್ಚಿದ್ದಾರೆ. ಈ ವೇಳೆ ರಾತ್ರಿ ಪಾಳಿಯಲ್ಲಿದ್ದ ಕೆಲ ಪತ್ರಕರ್ತರು ಜೀವ ಉಳಿಸಿಕೊಳ್ಳಲು ಟೆರೇಸ್ ಮೇಲೆ ಓಡಿದರು. ಈ ವೇಳೆ ಅವರ ಮೇಲೂ ದಾಳಿಗೆ ಮುಂದಾಗಿದ್ದ ಉದ್ರಿಕ್ತರಿಂದ ಸುಮಾರು 30 ಪತ್ರಕರ್ತರನ್ನ ರಕ್ಷಣೆ ಮಾಡಲಾಯಿತು. ಷರೀಫ್‌ಗೆ ಗುಂಡೇಟಿಗೆ ಬಲಿ 2024ರ ಡಿ.12ರಂದು ಬಾಂಗ್ಲಾದೇಶ ವಿದ್ಯಾರ್ಥಿ ದಂಗೆಯ ನೇತೃತ್ವವಹಿಸಿದ್ದ ಷರೀಫ್ ಉಸ್ಮಾನ್ ಹಾದಿ ಅವರ ಮೇಲೆ, ಕಳೆದ ವಾರ ಮುಸುಕುಧಾರಿಗಳ ಗುಂಪೊಂದು ಗುಂಡಿನ ದಾಳಿ ನಡೆಸಿತ್ತು.

ಹಾದಿ ಅವರಿಗೆ ಸಿಂಗಾಪುರದಲ್ಲಿ ಚಿಕಿತ್ಸೆ ನೀಡಲಾಗುತ್ತಿತ್ತು. ಆದರೆ ಚಿಕಿತೆ ಫಲಕಾರಿಯಾಗದೇ ಹಾದಿ ಮೃತಪಟ್ಟಿದ್ದಾರೆ ಎಂದು ಸಿಂಗಾಪುರ ಸರ್ಕಾರದ ಮೂಲಗಳು ಖಚಿತಪಡಿಸಿವೆ. ಪುಗಳ ಬಗ್ಗೆ ಎಚ್ಚರ ವಹಿಸಿ ಇನ್ನೂ ಬಾಂಗ್ಲಾದಲ್ಲಿ ಕೆಲ ಭಯೋತ್ಪಾದಕ ಗುಂಪುಗಳು ಹಿಂಸಾಚಾರಕ್ಕೆ ಪ್ರಚೋದನೆ ನೀಡುತ್ತಿವೆ ಅನ್ನೋ ಸಂಶಯ ವ್ಯಕ್ತವಾಗಿದೆ. ಈ ಹಿನ್ನೆಲೆ ನಾಗರಿಕರು ಎಚ್ಚರದಿಂದಿರುವಂತೆ ಬಾಂಗ್ಲಾ ಮಧ್ಯಂತರ ಸರ್ಕಾರ ಸಲಹೆ ನೀಡಿದೆ. ಕೆಲವು ಪ್ರತ್ಯೇಕ ಭಯೋತ್ಪಾದಕ ಗುಂಪುಗಳು ನಡೆಸುತ್ತಿರುವ ಎಲ್ಲಾ ರೀತಿಯ ಹಿಂಸಾಚಾರದ ವಿರುದ್ಧ ಜಾಗರೂಕವಾಗಿರಬೇಕು. ಹಿಂಸಾತ್ಮಕ ಘಟನೆಗಳನ್ನ ನಾವು ಬಲವಾಗಿ ಖಂಡಿಸುತ್ತೇವೆ, ದೇಶದಲ್ಲಿ ಅಶಾಂತಿ ಸೃಷ್ಟಿಸಲು ನಾವು ಬಿಡೋದಿಲ್ಲ ಎಂದು ಹೇಳಿದೆ.

## ನೂತನ ಪಂಪ್‌ಸೆಟ್ ನೀತಿಗೆ ರೈತರ ವಿರೋಧ..!



ಕೃಷ್ಣರಾಜಪೇಟೆಯ ಸೆಸ್ಕ್ ಉಪ ವಿಭಾಗೀಯ ಕಚೇರಿಯಲ್ಲಿನ ತ್ರೈಮಾಸಿಕ ಜನಸಂಪರ್ಕ 3 ಸಭೆಯಲ್ಲಿ ರೈತರು ಮಾತನಾಡಿದರು

ರಾಜ್ಯ ಸರಕಾರ ಜಾರಿಗೆ ತಂದಿರುವ ನೂತನ ಅಕ್ರಮ-ಸಕ್ರಮ ವಿದ್ಯುತ್ ಪಂಪ್‌ಸೆಟ್ ನೀತಿ ರದ್ದುಪಡಿಸಿ ಹಳೆಯ ನೀತಿಯನ್ನೇ ಮುಂದುವರಿಸಬೇಕು ಎಂದು ತಾಲೂಕು ರೈತಸಂಘದ ಕಾರ್ಯಕರ್ತರು ಆಗ್ರಹಿಸಿದರು.

ಪಟ್ಟಣದ ಸೆಸ್ಕ್ ಉಪ ವಿಭಾಗೀಯ ಕಚೇರಿ ಆವರಣದಲ್ಲಿ ಇಲಾಖೆ ವತಿಯಿಂದ ಆಯೋಜಿಸಿದ್ದ ತ್ರೈಮಾಸಿಕ ಜನಸಂಪರ್ಕ ಸಭೆಯಲ್ಲಿ ರೈತರು ಈ ಒತ್ತಾಯ ಮಾಡಿದರು.

ತಾಲೂಕು ರೈತ ಸಂಘದ ಅಧ್ಯಕ್ಷ ಕಾರಿಗನಹಳ್ಳಿ ಪುಟ್ಟೇಗೌಡ ಮಾತನಾಡಿ, ಈ ಹಿಂದಿನ ಸರಕಾರ ಅಕ್ರಮ ವಿದ್ಯುತ್ ಸಂಪರ್ಕಗಳ ಸಕ್ರಮಕ್ಕೆ ಪ್ರತಿ ಪಂಪ್ ಸೆಟ್ ಗೆ 14 ಸಾವಿರ ರೂ. ನಿಗದಿಪಡಿಸಿತ್ತು. ಆದರೆ, ಈಗಿನ ಕಾಂಗ್ರೆಸ್ ಸರಕಾರ ಅದನ್ನು 25 ಸಾವಿರ ರೂ.ಗಳಿಗೆ ಏರಿಸಿ ಸುಲಿಗೆ ಮಾಡುತ್ತಿದೆ. ಯಾವುದೇ ಬೆಳೆಗಳ ಬೆಲೆ ಹೆಚ್ಚಾಗಿಲ್ಲ. ಆದರೆ, ಸರಕಾರ ವಿದ್ಯುತ್ ಬೆಲೆ ಸೇರಿದಂತೆ ಎಲ್ಲ ವಸ್ತುಗಳ ಬೆಲೆ ಹೆಚ್ಚಳ ಮಾಡಿ ರೈತರ ಬದುಕಿನ ಮೇಲೆ ಬರೆ ಎಳೆಯುತ್ತಿದೆ. ನಮಗೆ ರಾಜ್ಯ ಸರಕಾರದ ಯಾವುದೇ ಬಿಟ್ಟಿ ಭಾಗ್ಯಗಳ ಅಗತ್ಯ ವಿಲ್ಲ, ಬದಲಾಗಿ ರೈತರ ಪಂಪ್‌ಸೆಟ್‌ಗಳಿಗೆ ಉಚಿತ ವಿದ್ಯುತ್ ಸಂಪರ್ಕ ಕಲ್ಪಿಸಿ, ನಿತ್ಯ ಗುಣಮಟ್ಟದ ವಿದ್ಯುತ್ ಪೂರೈಸಲಿ" ಎಂದು ಆಗ್ರಹಿಸಿದರು

ನಿತ್ಯ ರಾತ್ರಿ 8.45ರಿಂದ 11.45 ಮತ್ತು ಬೆಳಗಿನ ಜಾವ 4.45ರಿಂದ 8.45ರವರೆಗೆ ಕೃಷಿಗೆ ವಿದ್ಯುತ್ ಪೂರೈಸಲಾಗುತ್ತಿದೆ. ತಾಲೂಕಿ ನಾದ್ಯಂತ ಚಿರತೆಗಳ ಹಾವಳಿ ಇರುವುದರಿಂದ ರೈತರು ಜೀವ ಭಯದಲ್ಲಿ ಹೊಲ, ಗದ್ದೆಗಳಿಗೆ ಹೋಗಿ ನೀರು ಹಾಯಿಸಬೇಕಿದೆ. ರಾತ್ರಿ 11.45ಕ್ಕೆ ಮನೆಗೆ ಬರುವ ರೈತ ಮತ್ತೆ ಬೆಳಗಿನ ಜಾವ 4.45ರ ವೇಳೆಗೆ ಗದ್ದೆಗಳಿಗೆ ನೀರು ಹಾಯಿಸಲು ಹೋಗಬೇಕಾದ ಸ್ಥಿತಿಯಿದೆ. ಈ ಸಮಯವನ್ನು ಬದಲಿಸಿ ಹಗಲಿನ ವೇಳೆ ವಿದ್ಯುತ್ ನೀಡಲಿ" ಎಂದು ಆಗ್ರಹಿಸಿದರು.

ಸೆಸ್ಕ್ ಉಪ ವಿಭಾಗದ ಕಾರ್ಯಪಾಲಕ ಅಭಿಯಂತರ ಪುಟ್ಟಸ್ವಾಮಿ ಮಾತನಾಡಿ, "ಅಕ್ರಮ ಸಕ್ರಮ ನೀತಿ ರಾಜ್ಯ ಸರಕಾರಕ್ಕೆ ಸಂಬಂಧಿಸಿದ್ದು, ಈ ಕುರಿತು ರೈತರ ವಿರೋಧವನ್ನು ಮೇಲಧಿಕಾರಿಗಳ ಗಮನಕ್ಕೆ ತರಲಾಗುವುದು. ತಾಲೂಕಿನ ಕೃಷ್ಣಾಪುರ ದಲ್ಲಿರುವ ಅಲೆಮಾರಿ ಜನಾಂಗ ದವರು ನಿಯಮಾನುಸಾರ ನಿಗಮಕ್ಕೆ ನಿಗದಿತ ಹಣ ಪಾವತಿಸಿದರೆ ಅವರಿಗೆ ವಿದ್ಯುತ್ ಸಂಪರ್ಕ ನೀಡಲಾಗುತ್ತದೆ. ಅಲೆಮಾರಿ ಜನಾಂಗದ ಬೀದಿಗಳಿಗೆ ಅಗತ್ಯವಾದ ಬೀದಿ ದೀಪಗಳ ವ್ಯವಸ್ಥೆ ಯನ್ನು ಆಯಾ ಗ್ರಾಮ ಪಂಚಾಯಿತಿ ವತಿ ಯಿಂದ ಹಾಕಬೇಕು. ತಾಲೂಕಿನಲ್ಲಿ ಸುಮಾರು 1710 ತೋಟದ ಮನೆಗಳಿದ್ದು, ಇವುಗಳಿಗೆ ಎನ್.ಜೆ.ವೈ ಯೋಜನೆಯಡಿ 5-6 ಮನೆಗಳಿಗೆ ಒಂದು ಟಿಸಿ ಅಳವಡಿಸಿ ವಿದ್ಯುತ್ ಸಂಪರ್ಕ ನೀಡಲು ಯೋಜಿಸಿದ್ದು, ತೋಟದ ಮನೆ ವಾಸಿ ಗಳು ಸ್ವಂತ ಖರ್ಚಿನಲ್ಲಿ ಸ್ವಯಂ ಕಾಮಗಾರಿ ಯಡಿ ಯಲ್ಲಿ ಕೆಲಸ ಮಾಡಿಸಿಕೊಳ್ಳಬೇಕು" ಎಂದರು.

ರೈತ ಮುಖಂಡರಾದ ಕಾರಿಗನಹಳ್ಳಿ ಪುಟ್ಟೇಗೌಡ, ಮರುವನಹಳ್ಳಿ ಶಂಕರ್, ಮುದ್ದು ಕುಮಾರ್, ನಗರೂರು ಕುಮಾರ್, ಹೊನ್ನೇ ಗೌಡ, ಚೌಡೇನಹಳ್ಳಿ ಕೃಷ್ಣಗೌಡ, ಲಕ್ಷ್ಮೀಪುರ ನಾಗರಾಜು, ಹರಳಹಳ್ಳಿ ಗ್ರಾಮ ಪಂಚಾಯಿತಿ ಸದಸ್ಯ ಕರ್ತೇನಹಳ್ಳಿ ಸುರೇಶ್, ಮುಖಂಡ ವಡಕಹಳ್ಳಿ ಮಂಜೇಗೌಡ ಮಾತನಾಡಿದರು.

ಕಾರ್ಯಪಾಲಕ ಅಭಿಯಂತರ ಪುಟ್ಟಸ್ವಾಮಿ, ಕೆಪಿಟಿಸಿಎಲ್ ಸಹಾಯಕ ಕಾರ್ಯಪಾಲಕ ಅಭಿಯಂತರ ತಿಮ್ಮಪ್ಪ, ವಿವಿಧ ವಿಭಾಗಗಳ ನಿರ್ವಹಣಾ ಎಂಜಿನಿಯರುಗಳಾದ ಫಾಸಿಲ್, ಕೆ.ಆರ್.ಹರೀಶ್, ಶಂಕರ್, ಶಿವಕುಮಾರ್, ಶಿವರಾಂ, ಸುನೀಲ್, ಶ್ರೀಕಾಂತ್, ಶುಭಾಂಕ್, ಶಿವಶಂಕರ ಮೂರ್ತಿ ಮತ್ತಿತರರು ಸಭೆಯಲ್ಲಿದ್ದರು.

## ಪ್ರೇಮ ವಿವಾಹ ವಿಚಾರದಲ್ಲಿ ಜಗಳ, ಕೋಪದಲ್ಲಿ ವ್ಯಕ್ತಿಯ ಮೂಗು ಕತ್ತರಿಸಿದ ಜನ

**ಬಾರ್ಮರ್:** ಪ್ರೇಮ ವಿವಾಹದ ವಿಚಾರವಾಗಿ ಎರಡು ಕುಟುಂಬಗಳ ನಡುವೆ ಜಗಳ ನಡೆದಿರುವ ಘಟನೆ ರಾಜಸ್ಥಾನದ ಬಾರ್ಮರ್‌ನಲ್ಲಿ ನಡೆದಿದೆ. ಘಟನೆಯಲ್ಲಿ ವರನ ಅಣ್ಣನ ಮೂಗನ್ನು ಹುಡುಗಿಯ ಮನೆಯವರು ಕತ್ತರಿಸಿರುವ ಅಮಾನವೀಯ ಘಟನೆ ಎದುರಾಗಿದೆ. ಮಹಿಳೆಯ ಕಡೆಯವರು ಮೊದಲು ಹಲ್ಲೆ ನಡೆಸಿದ್ದರು. ಆ ವ್ಯಕ್ತಿಯ ಅಣ್ಣನ ಮೂಗನ್ನು ಹರಿತವಾದ ಆಯುಧದಿಂದ ಕತ್ತರಿಸಿ ಹಾಕಿದರು. ಇದಕ್ಕೆ ಪ್ರತೀಕಾರವಾಗಿ, ಆ ವ್ಯಕ್ತಿಯ ಸಂಬಂಧಿಕರು ಮಹಿಳೆಯ ಚಿಕ್ಕಪ್ಪನ ಮೇಲೆ ಹಲ್ಲೆ ನಡೆಸಿ ಅವರ ಕಾಲು ಮುರಿದಿದ್ದಾರೆ. ಇಬ್ಬರ ಸ್ಥಿತಿ ಗಂಭೀರವಾಗಿದೆ. 25 ವರ್ಷದ ಶ್ರವಣ್ ಸಿಂಗ್ ಮತ್ತು ಅದೇ ಗ್ರಾಮದ ಹುಡುಗಿಯ ನಡುವಿನ ಪ್ರೇಮ ವಿವಾಹದಿಂದ ಈ ಘರ್ಷಣೆ ಹುಟ್ಟಿಕೊಂಡಿದೆ. ಮಹಿಳೆಯ ಕುಟುಂಬವು ಈ ಮದುವೆಯನ್ನು ಎಂದಿಗೂ ಒಪ್ಪಲಿಲ್ಲ, ಮತ್ತು ಅಂದಿನಿಂದ ಎರಡೂ ಕುಟುಂಬಗಳ ನಡುವೆ ಉದ್ವಿಗ್ನತೆ ಮುಂದುವರೆದಿದೆ. ಶ್ರವಣ್ ಸಿಂಗ್ ಈಗ ತನ್ನ ಪತ್ನಿ ಮತ್ತು ಕುಟುಂಬದೊಂದಿಗೆ ಗುಜರಾತ್‌ನಲ್ಲಿ ವಾಸವಿದ್ದಾನೆ. ಶ್ರವಣ್‌ನ ಅಣ್ಣ ಯುಕೆ ಸಿಂಗ್ (35) ಹೊಲದಿಂದ ಹಿಂತಿರುಗುತ್ತಿದ್ದಾಗ ಮಹಿಳೆಯ ಚಿಕ್ಕಪ್ಪ ಧರ್ಮ್ ಸಿಂಗ್ (50) ಮತ್ತು ಅವರ ಸಹಚರರು ಹೊಂಚು ಹಾಕಿ ಹಲ್ಲೆ ನಡೆಸಿದ್ದಾರೆ. ಅವರು ಯುಕೆ ಸಿಂಗ್ ಅವರ ಮೂಗನ್ನು ಹರಿತವಾದ ಆಯುಧದಿಂದ ಕತ್ತರಿಸಿದ್ದಾರೆ,

ಹೇಗೋ ಮನೆ ತಲುಪುವಲ್ಲಿ ಯಶಸ್ವಿಯಾದರು.ಇದರಿಂದ ಕೋಪಗೊಂಡ ಯು.ಕೆ. ಸಿಂಗ್ ಅವರ ಕುಟುಂಬವು ಮಹಿಳೆಯ ಮನೆಯಲ್ಲಿ ಧರ್ಮ್ ಸಿಂಗ್ ಮೇಲೆ ಹಲ್ಲೆ ನಡೆಸುವ ಮೂಲಕ ಪ್ರತೀಕಾರ ತೀರಿಸಿಕೊಂಡಿತು, ಇದರಿಂದಾಗಿ ಅವರ ಕಾಲು ತೀವ್ರವಾಗಿ ಮುರಿದು ಹೋಯಿತು. ಗಾಯಗೊಂಡ ಇಬ್ಬರನ್ನೂ ಗುಡಮಲನಿ ಆಸ್ಪತ್ರೆಗೆ ಕರೆದೊಯ್ಯಲಾಯಿತು. ಯುಕೆ ಸಿಂಗ್ ಅವರನ್ನು ಹೆಚ್ಚಿನ ಚಿಕಿತ್ಸೆಗಾಗಿ ಸಂಚೋರ್‌ಗೆ ಕರೆದೊಯ್ಯಲಾಯಿತು. ಗಂಭೀರ ಸ್ಥಿತಿಯಲ್ಲಿರುವ ಧರ್ಮ್ ಸಿಂಗ್ ಅವರನ್ನು ಜೋಧ್‌ಪುರಕ್ಕೆ ಕಳುಹಿಸಲಾಯಿತು. ಘಟನೆಯ ನಂತರ ಗುಡಮಲನಿ ಪೊಲೀಸ್ ಠಾಣೆಯ ಡಿಎಸ್ಪಿ ಮತ್ತು ಹಿರಿಯ ಅಧಿಕಾರಿಗಳು ಸ್ಥಳಕ್ಕೆ ತಲುಪಿದರು. ಎರಡೂ ಕಡೆಯ ದೂರುಗಳ ಮೇರೆಗೆ ಪ್ರಕರಣಗಳನ್ನು ದಾಖಲಿಸಲಾಗಿದೆ. ಆರೋಪಿಗಳನ್ನು ಬಂಧಿಸಲು ಪ್ರತ್ಯೇಕ ತಂಡಗಳನ್ನು ರಚಿಸಲಾಗಿದೆ.

ಕಳೆದ ತಿಂಗಳು ಮಹಾರಾಷ್ಟ್ರದಲ್ಲಿ ನಡೆದ ಮದುವೆ ಸಮಾರಂಭದಲ್ಲಿ ವರನ ಮೇಲೆ ಚಾಕುವಿನಿಂದ ಇರಿದ ಘಟನೆ ನಡೆದಿದೆ. ಡಿಜೆ ನೃತ್ಯದ ವೇಳೆ ನಡೆದ ಸಣ್ಣಪುಟ್ಟ ವಾಗ್ವಾದದ ನಂತರ 22 ವರ್ಷದ ಸಜಲ್ ರಾಮ್ ಮೇಲೆ ರಾಘೋ ಜಿತೇಂದ್ರ ಬಕ್ಷಿ ಎಂಬಾತ ವೇದಿಕೆಯಲ್ಲಿ ಹಲ್ಲೆ ನಡೆಸಿದ್ದ. ಮದುವೆಯ ವಿಡಿಯೋಗ್ರಾಫರ್ ಮತ್ತು ಆತನ ಸಹಚರ ಬೈಕ್‌ನಲ್ಲಿ ತಪ್ಪಿಸಿಕೊಳ್ಳಲು ಪ್ರಯತ್ನಿಸುತ್ತಿದ್ದಾಗ ದಾಳಿಕೋರನನ್ನು ಡ್ರೋನ್ ಮೂಲಕ ಸುಮಾರು ಎರಡು ಕಿಲೋಮೀಟರ್‌ಗಳವರೆಗೆ ಬೆನ್ನಟ್ಟಿದ್ದ.

## ಅಲೆಗಳ ಅಬ್ಬರಕ್ಕೆ ಸಮುದ್ರದ ಪಾಲಾದ ಸಹೋದರರು

**ಕಾರವಾರ**: ಸಮುದ್ರದಲ್ಲಿ ಮುಳುಗಿ ಇಬ್ಬರು ಸಹೋದರರು ಸಾವಿಗೀಡಾದ ಘಟನೆ ಹೊನ್ನಾವರದ ಮಂಕಿಯಲ್ಲಿ ನಡೆದಿದೆ. ಮೃತರನ್ನು ಮದನ್ ನಾರಾಯಣ ಖಾರ್ವಿ (17), ಸುಜನ್ ನಾರಾಯಣ ಖಾರ್ವಿ (15) ಎಂದು ಗುರುತಿಸಲಾಗಿದೆ. ಗುರುವಾರ ಕಬ್ಬಡ್ಡಿ ಆಡಿ, ನಂತರ ಇಬ್ಬರೂ ಸಂಜೆ ಸಮುದ್ರಕ್ಕೆ ಆಟ ಆಡಲು ಇಳಿದಿದ್ದರು. ಈ ವೇಳೆ ಅಲೆಗಳ ಹೊಡೆತಕ್ಕೆ ಇಬ್ಬರು ಕೊಚ್ಚಿ ಹೋಗಿದ್ದರು ತೀವ್ರ ಹುಡುಕಾಟದ ಬಳಿಕ ಗುರುವಾರ ತಡರಾತ್ರಿ ಇಬ್ಬರ ಶವಗಳು ಪತ್ತೆಯಾಗಿವೆ. ಮೃತದೇಹಗಳನ್ನು ಹೊನ್ನಾವರ ಸರ್ಕಾರಿ ಆಸ್ಪತ್ರೆಗೆ ಮರಣೋತ್ತರ ಪರೀಕ್ಷೆಗಾಗಿ ರವಾನೆ ಮಾಡಲಾಗಿದೆ.

ಈ ಸಂಬಂಧ ಮಂಕಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಅಪ್ರಾಪ್ತೆ ಮೇಲಿನ ಅತ್ಯಾಚಾರ ಆರೋಪಕ್ಕೆ ಟ್ವಿಸ್ಟ್; ಮ್ಯೂಸಿಕ್ ಮೈಲಾರಿ ಕೇಸ್‌ನಲ್ಲಿ ಬೆಳವಣಿಗೆ



**ಬಾಗಲಕೋಟೆ,:** ಅಪ್ರಾಪ್ತೆ ಮೇಲೆ ಉತ್ತರ ಕರ್ನಾಟಕದ ಖ್ಯಾತ ಜನಪದ ಗಾಯಕ ಮ್ಯೂಸಿಕ್ ಮೈಲಾರಿ ಅತ್ಯಾಚಾರ ಪ್ರಕರಣ ಕೇಸ್‌ಗೆ ಟ್ವಿಸ್ಟ್ ಸಿಕ್ಕಿದೆ. ಸಂತ್ರಸ್ತೆಯದ್ದು ಎನ್ನಲಾದ ವಿಡಿಯೋವಂದು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದ್ದು, ಹೆಸರು ಕೆಡಿಸುವ ಉದ್ದೇಶದಿಂದ ನಾನು ಹಾಗೆಲ್ಲ ಹೇಳಿದ್ದೇನೆ, ನನ್ನದು ತಪ್ಪಾಗಿದೆ ಕ್ಷಮಿಸಿ ಎಂದು ಅಪ್ರಾಪ್ತೆ ಹೇಳಿರೋದು ವಿಡಿಯೋದಲ್ಲಿದೆ. ಮ್ಯೂಸಿಕ್ ಮೈಲಾರಿ ಅಣ್ಣ, ಲತಾ, ಶ್ರಾವಣಿ ಮತ್ತು ಡ್ಯಾನ್ಸರ್ ರುಕ್ಕು ಬಗ್ಗೆ ನಾನು ಏನೇನೋ ಮಾತಾಡಿದ್ದೇನೆ.

ಅವರ ಹೆಸರು ಕೆಡಿಸುವ ಜೊತೆಗೆ, ನಾನು ಹೆಸರು ಮಾಡುವ ಉದ್ದೇಶದಿಂದ ಆ ರೀತಿ ಹೇಳಿದ್ದು, ನನ್ನದು ತಪ್ಪಾಗಿದೆ. ನನ್ನ ಕ್ಷಮಿಸಿ ಎಂದು ಯುವತಿ ಕೈಮುಗಿದು ಹೇಳಿರುವ ದೃಶ್ಯಗಳು ವಿಡಿಯೋದಲ್ಲಿವೆ. ಅಪ್ರಾಪ್ತೆಯ ವಿರುದ್ಧ ಮೈಲಾರಿ ಅಭಿಮಾನಿಗಳು ಹಳೆಯ ವಿಡಿಯೋವನ್ನು ಸಾಮಾಜಿಕ ಜಾಲತಾಣದಲ್ಲಿ ಅಪ್‌ಲೋಡ್ ಮಾಡಿದ್ದಾರೆ ಎನ್ನಲಾಗಿದೆ. ಇನ್ನು ಕ್ಷಮೆ ಕೇಳಿರುವ ವಿಡಿಯೋ ವೈರಲ್ ಆಗುತ್ತಿದ್ದಂತೆ ಸಂತ್ರಸ್ತೆ ಈ ಬಗ್ಗೆ ಸ್ಪಷ್ಟನೆ ನೀಡಿದ್ದಾರೆ. ನಾನು ಯುವಕನೊಬ್ಬನ ಜೊತೆ ಇರುವ ಮತ್ತು ತಪ್ಪಾಯಿತು ಎಂದು ಹೇಳಿರುವ ವಿಡಿಯೋ ಈಗಿನದ್ದಲ್ಲ. ನನ್ನ ಮೇಲೆ ಅತ್ಯಾಚಾರ ನಡೆದ ಬಳಿಕ ಎರಡನೇ ದಿನ ಮಾಡಿರೋದು. ಬೆಂಕಿ ಲತಾ ಡ್ಯಾನ್ಸರ್, ರುಕ್ಕು ಸಿಂಗರ್, ಡಿಜೆ ಮಾಂತೇಶ್ ಗೋಕಾಕ್ ಅವರು ಬಂದು ನನಗೆ ಹೊಡೆದು ಆ ವಿಡಿಯೋ ಮಾಡಿಸಿದ್ದರು. ಅದೇ ವಿಡಿಯೋವನ್ನೀಗ ಕೆಲವರು ಇನ್‌ಸ್ಟಾಗ್ರಾಮ್‌ನಲ್ಲಿ ಎಡಿಟ್ ಮಾಡಿ ಹಾಕ್ತಿದಾರೆ.

ಈ ರೀತಿ ವಿಡಿಯೋ ಶೇರ್ ಮಾಡುತ್ತಿರುವವರ ವಿರುದ್ಧ ಸೈಬರ್ ಕ್ರೈಮ್ ಪೊಲೀಸರಿಗೆ ದೂರು ನೀಡುತ್ತೇನೆ. ನಾನೊಬ್ಬ ದಲಿತ ಹುಡುಗಿಯಾಗಿದ್ದು, ನನಗೆ ನ್ಯಾಯ ಬೇಕು. ಆ ವಿಡಿಯೋ ಈಗಿನದ್ದು ಅಂತ ಯಾರು ತಿಳಿದುಕೊಳ್ಳಬೇಡಿ. ನನಗೆ ನ್ಯಾಯ ಕೊಡಿಸಿ, ಸಪೋರ್ಟ್ ಮಾಡಿ ಎಂದು ಯುವತಿ ಕೈ ಮುಗಿದು ಕೇಳಿಕೊಂಡಿದ್ದಾಳೆ. ಆರ್ಕೆಸ್ಟ್ರಾ ಕಾರ್ಯಕ್ರಮದ ನಂತರ ಅಪ್ರಾಪ್ತೆ ಮೇಲೆ ಲೈಂಗಿಕ ದೌರ್ಜನ್ಯ ಎಸಗಿರುವ ಆರೋಪ ಮ್ಯೂಸಿಕ್ ಮೈಲಾರಿ ವಿರುದ್ಧ ಕೇಳಿಬಂದಿದ್ದು,

ಈ ಸಂಬಂಧ ಬಾಗಲಕೋಟೆ ಜಿಲ್ಲೆಯ ರಬಕವಿಬನಹಟ್ಟಿ ತಾಲೂಕಿನ ಪೋಕ್ಸೊ ಪ್ರಕರಣ ದಾಖಲಾಗಿದೆ. ಕೇಸ್ ಬೆನ್ನಲ್ಲೇ ತಲೆಮರಿಸಿಕೊಂಡಿದ್ದ ಮೈಲಾರಿ ಡಿಸೆಂಬರ್ 17ರಂದು ಮಹಾರಾಷ್ಟ್ರಕ್ಕೆ ತೆರಳುತ್ತಿರುವಾಗ ಪೊಲೀಸರಿಗೆ ಕೈಗೆ ಸಿಕ್ಕಿಬಿದ್ದ. ಮಹಾಲಿಂಗಪುರ ಪೊಲೀಸರು ಆರೋಪಿಯನ್ನು ಬಂಧಿಸಿದ್ದರು.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

## ಡಿನ್ನರ್ ಮೀಟಿಂಗ್ ಆಗ್ತಿದ್ದಂತೆ ಸಿದ್ದರಾಮಯ್ಯಗೆ ಫುಲ್ ಶಕ್ತಿ

ಕರ್ನಾಟಕ ಕಾಂಗ್ರೆಸ್‌ನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಡುವಿನ ನಾಯಕತ್ವ ತಳ್ಳಾಟಕ್ಕೆ ಮತ್ತೊಂದು ಆಯಾಮ ಸೇರಿದೆ. ಸಚಿವ ಸತೀಶ್ ಜಾರಕಿಹೊಳಿ ಅವರ ಬೆಳಗಾವಿ ನಿವಾಸದಲ್ಲಿ ಡಿಸೆಂಬರ್ 18ರ ರಾತ್ರಿ ನಡೆದ ಡಿನ್ನರ್ ಮೀಟಿಂಗ್‌ನಲ್ಲಿ ಸಿಎಂ ಸಿದ್ದರಾಮಯ್ಯ ಸೇರಿದಂತೆ ಹಲವು ಆಪ್ತ ಸಚಿವರು ಮತ್ತು ಶಾಸಕರು ಭಾಗವಹಿಸಿದ್ದರು. ಈ ಮೀಟಿಂಗ್ ಸಿದ್ದು ಬಣಕ್ಕೆ ಬಲ ತೋರಿಸುವಂತೆ ಕಾಣುತ್ತಿದ್ದು, ಹೈಕಮಾಂಡ್‌ಗೆ ಸಂದೇಶ ರವಾನಿಸಿದಂತೆ ಭಾಸವಾಗಿದೆ. ಬೆಳಗಾವಿ ಚಳಿಗಾಲ ಅಧಿವೇಶನದ ನಡುವೆ ಕಾಂಗ್ರೆಸ್ ಪಾಳಯದಲ್ಲಿ ಡಿನ್ನರ್ ಪಾಲಿಟಿಕ್ಸ್ ಜೋರಾಗಿದೆ. ಮೊದಲು ಡಿ.ಕೆ. ಶಿವಕುಮಾರ್ ಬಣದ ಶಾಸಕರು ಡಿನ್ನರ್ ಮೀಟಿಂಗ್ ಆಯೋಜಿಸಿದ್ದರು.



ಇದಕ್ಕೆ ಕೌಂಟರ್ ಎಂಬಂತೆ ಸತೀಶ್ ಜಾರಕಿಹೊಳಿ ಅವರು ತಮ್ಮ ನಿವಾಸದಲ್ಲಿ ಡಿನ್ನರ್ ಏರ್ಪಡಿಸಿದ್ದರು. ಈ ಮೀಟಿಂಗ್‌ನಲ್ಲಿ ಸಿಎಂ ಸಿದ್ದರಾಮಯ್ಯ, ಗೃಹ ಸಚಿವ ಜಿ. ಪರಮೇಶ್ವರ್, ಎಚ್.ಸಿ. ಮಹದೇವಪ್ಪ, ಬಿ.ಜಡ್ ಜಮೀರ್ ಅಹ್ಮದ್ ಖಾನ್, ಎಂ.ಸಿ. ಸುಧಾಕರ್ ಸೇರಿದಂತೆ ಹಲವು ಸಚಿವರು ಮತ್ತು ಶಾಸಕ ಎ. ಎಸ್. ಪೊನ್ನಣ್ಣ ಭಾಗಿಯಾಗಿದ್ದ ಸತೀಶ್ ಜಾರಕಿಹೊಳಿ ಅವರು ಸಿದ್ದರಾಮಯ್ಯ ಅವರ ಆಪ್ತರೆಂದು ಪರಿಗಣಿಸಲಾಗುತ್ತದೆ. ಈ ಮೀಟಿಂಗ್ ನಾಯಕತ್ವ ಬದಲಾವಣೆ ಚರ್ಚೆಯ ನಡುವೆ ನಡೆದಿರುವುದು ಗಮನಾರ್ಹ. ಡಿ.ಕೆ. ಶಿವಕುಮಾರ್ ಅವರು ದೇವಾಲಯ ಭೇಟಿಯಲ್ಲಿದ್ದ ಸಮಯದಲ್ಲೇ ಈ ಡಿನ್ನರ್ ನಡೆದಿದ್ದು, ಸಿದ್ದು ಬಣದಿಂದ ಶಕ್ತಿ ಪ್ರದರ್ಶನ ಎಂಬಂತೆ ಕಾಣುತ್ತಿದೆ. ಮೀಟಿಂಗ್‌ನಲ್ಲಿ "ಡೋಂಟ್ ವರಿ, ನಾವಿದ್ದೇವೆ" ಎಂಬ ಅಭಯ ಸಂದೇಶ ನೀಡಲಾಗಿದೆಯೇ ಎಂಬ ಚರ್ಚೆಯಿದೆ. ಅಧಿವೇಶನದಲ್ಲಿ ಸಿಎಂ ಸಿದ್ದರಾಮಯ್ಯ ಅವರು "ನಾನೇ ಪೂರ್ಣಾವಧಿ ಮುಖ್ಯಮಂತ್ರಿ" ಎಂದು ಘೋಷಿಸಿದ್ದರು. "ಎರಡೂವರೆ ವರ್ಷದ ಒಪ್ಪಂದ ಎಲ್ಲಿಯೂ ಇಲ್ಲ, ಹೈಕಮಾಂಡ್ ನನ್ನ ಪರವಾಗಿದೆ" ಎಂದು ಸ್ಪಷ್ಟಪಡಿಸಿದ್ದರು. ಈ ಡಿನ್ನರ್ ಮೀಟಿಂಗ್ ಆ ಹೇಳಿಕೆಗೆ ಬಲ ನೀಡುವಂತೆ ಭಾಸವಾಗಿದೆ. ವಿಪಕ್ಷಗಳು ಸಿದ್ದರಾಮಯ್ಯ ಅವರನ್ನು "ಹೊರಹೋಗುತ್ತಿರುವ ಸಿಎಂ" ಎಂದು ಕರೆಯುತ್ತಿರುವ ನಡುವೆ ಈ ಮೀಟಿಂಗ್ ರಾಜಕೀಯ ಮಹತ್ವ ಪಡೆದುಕೊಂಡಿದೆ.

ಡಿ.ಕೆ. ಶಿವಕುಮಾರ್ ಅವರು ಈ ಮೀಟಿಂಗ್ ಬಗ್ಗೆ "ಊಟ ಮಾಡುವುದರಲ್ಲಿ ತಪ್ಪೇನಿದೆ?" ಎಂದು ಪ್ರಶ್ನಿಸಿದ್ದಾರೆ. ಆದರೆ ರಾಜಕೀಯ ವಲಯದಲ್ಲಿ ಇದು ನಾಯಕತ್ವ ತಳ್ಳಾಟದ ಭಾಗವೆಂದು ಚರ್ಚೆಯಾಗುತ್ತಿದೆ. ಹೈಕಮಾಂಡ್‌ಗೆ "ನಾಯಕತ್ವ ಬದಲಾವಣೆ ಸರಿಯಲ್ಲ" ಎಂಬ ಸಂದೇಶ ರವಾನಿಸಲಾಗಿದೆಯೇ ಎಂಬ ಅನುಮಾನವಿದೆ ಕಾಂಗ್ರೆಸ್‌ನಲ್ಲಿ ಅಧಿಕಾರ ಹಂಚಿಕೆ ಒಪ್ಪಂದದ ಚರ್ಚೆ ಮತ್ತೆ ಚಿಗುರೊಡೆದಿದೆ. ಸಿದ್ದರಾಮಯ್ಯ ಅವರು ಪೂರ್ಣಾವಧಿ ಸಿಎಂ ಆಗಿ ಮುಂದುವರಿಯುವುದು ಖಚಿತವೆಂದು ಆಪ್ತರು ತೋರಿಸುತ್ತಿದ್ದಾರೆ. ಡಿನ್ನರ್ ಮೀಟಿಂಗ್‌ಗಳು ಕಾಂಗ್ರೆಸ್ ಒಳಗಿನ ಬಣಗಳ ಶಕ್ತಿ ಪ್ರದರ್ಶನವಾಗಿ ಮಾರ್ಪಟ್ಟಿವೆ. ಹೈಕಮಾಂಡ್ ಈ ಡಿನ್ನರ್ ಪಾಲಿಟಿಕ್ಸ್‌ಗೆ ಯಾವ ರೀತಿ ಸ್ಪಂದಿಸುತ್ತದೆ ಎಂಬುದು ಕುತೂಹಲ ಮೂಡಿಸಿದೆ. ಕರ್ನಾಟಕ ರಾಜಕಾರಣದಲ್ಲಿ ಮುಂದಿನ ದಿನಗಳು ರೋಚಕವಾಗಲಿವೆ.

## ಷರತ್ತಿನ ಅರಿವಿನೊಂದಿಗೆ 2ನೇ ವಿಮಾನ ನಿಲ್ದಾಣ ಟೆಂಡರ್ ಆಹ್ವಾನ: ಎಂ.ಬಿ ಪಾಟೀಲ್ ಹೇಳಿಕೆ



**ಬೆಂಗಳೂರು:** ಸಿಲಿಕಾನ್ ಸಿಟಿಯ ಸಮೀಪ ಎರಡನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಿಸಲು 'ಬೆಂಗಳೂರು ಇಂಟರ್‌ನ್ಯಾಷನಲ್ ಏರ್‌ಪೋರ್ಟ್ ಲಿಮಿಟೆಡ್'ನ (ಬಿಐಎಎಲ್) ಅನುಮತಿ ಬೇಕೆನ್ನುವುದು ನಮ್ಮ ಅರಿವಿನಲ್ಲಿದೆ. ಇದಕ್ಕೆ 2033ರವರೆಗೂ ಕಾಲಾವಕಾಶವಿದೆ. ಹೀಗಾಗಿಯೇ, ದೂರದೃಷ್ಟಿ ಇಟ್ಟುಕೊಂಡು ಈಗಿನಿಂದಲೇ ಉಳಿದ ಕೆಲಸಗಳನ್ನು ನಾವು ಆರಂಭಿಸಿದ್ದೇವೆ ಎಂದು ಮೂಲಸೌಕರ್ಯ ಅಭಿವೃದ್ಧಿ ಸಚಿವ ಎಂ.ಬಿ ಪಾಟೀಲ್ ಹೇಳಿದ್ದಾರೆ.


ಎರಡನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಕುರಿತು ಸಂಸತ್ ಅಧಿವೇಶನದಲ್ಲಿ ಪ್ರಸ್ತಾಪವಾಗಿರುವ ಹಿನ್ನೆಲೆ ಪ್ರತಿಕ್ರಿಯಿಸಿದ ಅವರು, ದೇವನಹಳ್ಳಿಯ ಸಮೀಪದಲ್ಲಿ ಈಗ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಸಕ್ರಿಯವಾಗಿದೆ. ಇದು ಆರಂಭವಾಗುವಾಗಲೇ 2033ರವರೆಗೂ 150 ಕಿ.ಮೀ. ಸುತ್ತಮುತ್ತಲಿನ ಪ್ರದೇಶದಲ್ಲಿ ಮತ್ತೊಂದು ವಿಮಾನ ನಿಲ್ದಾಣ ನಿರ್ಮಿಸಬಾರದೆಂಬ ಷರತ್ತು ಇದೆ. ಏತನ್ಮಧ್ಯೆ ಹೊಸದೆಹಲಿ ಮತ್ತು ನವೀ ಮುಂಬೈಗಳಲ್ಲಿ ಇಂತಹ ಷರತ್ತುಗಳನ್ನು ಸಡಿಲಿಸಿ, ಎರಡನೆಯ ಏರ್‌ಪೋರ್ಟುಗಳ ನಿರ್ಮಾಣಕ್ಕೆ ಅವಕಾಶ ಮಾಡಿಕೊಡಲಾಗಿದೆ.

ಇದನ್ನು ಸಂದರ್ಭ ನೋಡಿಕೊಂಡು ಬಗೆಹರಿಸಿಕೊಳ್ಳಲಾಗುವುದು ಎಂದು ತಿಳಿಸಿದ್ದಾರೆ ಒಂದು ವಿಮಾನ ನಿಲ್ದಾಣ ಆಗಬೇಕೆಂದರೆ ಸ್ಥಳದ ಆಯ್ಕೆ, ಅದರ ಪರಿಶೀಲನೆ, ಭೂಸ್ವಾಧೀನ, ಪರಿಹಾರ ವಿತರಣೆ ಮುಂತಾದ ಅಂಶಗಳು ಮುಖ್ಯವಾಗುತ್ತವೆ. ಇವೆಲ್ಲವನ್ನೂ ಮುಗಿಸಿಕೊಳ್ಳಲು ಏನಿಲ್ಲವೆಂದರೂ ಐದಾರು ವರ್ಷಗಳು ಬೇಕಾಗುತ್ತವೆ. ಜೊತೆಗೆ ಬಿಐಎಎಲ್ ಅನುಮತಿ ಬೇಕಾಗುವುದು ಇವೆಲ್ಲ ಮುಗಿದ ಮೇಲೆ ಇದೆಲ್ಲ ಸಾಧ್ಯ. ಹೀಗಾಗಿಯೇ ಈಗ ಕರ್ನಾಟಕ ಕೈಗಾರಿಕಾ ಮತ್ತು ಮೂಲಸೌಕರ್ಯ ಅಭಿವೃದ್ಧಿ ನಿಗಮದ ಮೂಲಕ ಸ್ಥಳದ ಅನುಕೂಲ, ತಾಂತ್ರಿಕ ಮತ್ತು ಆರ್ಥಿಕ ಕಾರ್ಯಸಾಧ್ಯತಾ ವರದಿಯ ಉದ್ದೇಶಕ್ಕಾಗಿ ಟೆಂಡರ್ ಕರೆಯಲಾಗಿದೆ ಎಂದು ವಿವರಿಸಿದರು.

ಈ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲು 5 ತಿಂಗಳ ಕಾಲಾವಕಾಶ ಕೊಡಲಾಗುವುದು. ಇದನ್ನು ಸಿದ್ಧಪಡಿಸುವಾಗ ಪ್ರಯಾಣಿಕರ ದಟ್ಟಣೆ, ಕೈಗಾರಿಕೆ, ಪ್ರವಾಸೋದ್ಯಮ ಬೆಳವಣಿಗೆಗೆ ಇರುವ ಅವಕಾಶ, ಮೂಲಸೌಕರ್ಯ, ಭೌಗೋಳಿಕ ಲಕ್ಷಣಗಳು, ಮಳೆಯ ಪ್ರಮಾಣ, ಒಳಚರಂಡಿ, ಶಬ್ದ ಮಾಲಿನ್ಯ ಹಾಗೂ ತ್ಯಾಜ್ಯ ನಿರ್ವಹಣೆ ಮುಂತಾದ ಅಂಶಗಳನ್ನು ಪರಿಗಣಿಸಬೇಕಾಗುತ್ತದೆ. ಏನೇ ಇದ್ದರೂ ಬೆಂಗಳೂರಿಗೆ ಮತ್ತೊಂದು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಅಗತ್ಯವಿದೆ ಎಂಬುದನ್ನು ಸರ್ಕಾರ ಮನಗಂಡಿದೆ ಎಂದು ಸ್ಪಷ್ಟಪಡಿಸಿದರು. ಕನಕಪುರ ರಸ್ತೆಯಲ್ಲಿರುವ ಚಿಕ್ಕಹಳ್ಳಿ, ಸೋಮನಹಳ್ಳಿ ಹಾಗೂ ನೆಲಮಂಗಲ-ಕುಣಿಗಲ್ ರಸ್ತೆಯಲ್ಲಿ ಇರುವ ಮತ್ತೊಂದು ಸ್ಥಳವನ್ನು ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರದ ಉನ್ನತ ತಂಡ ಪರಿಶೀಲಿಸಿ, ತನ್ನ ವರದಿಯನ್ನು ನಮಗೆ ನೀಡಿದೆ. ಇದಾದ ನಂತರವೇ ಈಗ ಟೆಂಡರ್ ಆಹ್ವಾನಿಸಲಾಗಿದೆ ಎಂದು ಮಾಹಿತಿ ನೀಡಿದರು

## ಮೊಟ್ಟೆಯಲ್ಲಿ ಕ್ಯಾನ್ಸರ್ ಅಂಶವಿಲ್ಲ: ಸುಳ್ಳು ವದಂತಿಗಳಿಗೆ ದಿನೇಶ್ ಗುಂಡೂರಾವ್ ಸ್ಪಷ್ಟನೆ

**ಬೆಂಗಳೂರು:** ಇತ್ತೀಚಿನ ದಿನಗಳಲ್ಲಿ ಸಾಮಾಜಿಕ ಮಾಧ್ಯಮಗಳಲ್ಲಿ ಹರಡುತ್ತಿರುವ ಮೊಟ್ಟೆಯಲ್ಲಿ ಕ್ಯಾನ್ಸರ್ ಕಾರಕ ಅಂಶಗಳಿರುವುದು ಎಂಬ ವದಂತಿಗಳು ಜನರಲ್ಲಿ ಆತಂಕವನ್ನು ಹುಟ್ಟುಹಾಕಿವೆ. ಆದರೆ, ಕರ್ನಾಟಕದ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರು ಈ ವದಂತಿಗಳನ್ನು ಸಂಪೂರ್ಣವಾಗಿ ತಳ್ಳಿಹಾಕಿದ್ದು, "ಮೊಟ್ಟೆಯಲ್ಲಿ ಯಾವುದೇ ಕ್ಯಾನ್ಸರ್ ಕಾರಕ ಅಂಶಗಳಿಲ್ಲ. ಯಾರು ಆತಂಕಪಡಬೇಕಿಲ್ಲ, ಸೇವಿಸುವುದು ಸಂಪೂರ್ಣ ಸುರಕ್ಷಿತವಾಗಿದೆ" ಎಂದು ಸ್ಪಷ್ಟಪಡಿಸಿದ್ದಾರೆ.



ಈ ವಿಚಾರವು ವಿಧಾನಸಭೆಯ ಪ್ರಶ್ನೋತ್ತರ ಅವಧಿಯಲ್ಲಿ ಪ್ರಸ್ತಾಪವಾಯಿತು. ಬಿಜೆಪಿ ಶಾಸಕ ಸುನೀಲ್ ಕುಮಾರ್ ಅವರು ಮೊಟ್ಟೆಯ ಬಗ್ಗೆ ಕೇಳಿಬರುತ್ತಿರುವ ಕೆಲವು ಮಾಹಿತಿಗಳನ್ನು ಉಲ್ಲೇಖಿಸಿ, "ಸಾಮಾಜಿಕ ಜಾಲತಾಣಗಳಲ್ಲಿ ಮೊಟ್ಟೆಗಳಲ್ಲಿ ಹಾನಿಕಾರಕ ಅಂಶಗಳಿರುವುದು ಎಂಬ ಸುದ್ದಿಗಳು ಹರಡುತ್ತಿವೆ. ಇದರ ಬಗ್ಗೆ ಆರೋಗ್ಯ ಸಚಿವರು ಸ್ಪಷ್ಟನೆ ನೀಡಬೇಕು" ಎಂದು ಒತ್ತಾಯಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಸಚಿವ ದಿನೇಶ್ ಗುಂಡೂರಾವ್ ಅವರು, ಸರ್ಕಾರದ ಪರೀಕ್ಷಾ ವರದಿಗಳನ್ನು ಆಧರಿಸಿ ಉತ್ತರ ನೀಡಿದರು. ಕಳೆದ ವರ್ಷದಲ್ಲಿ 147 ಮೊಟ್ಟೆ ಮಾದರಿಗಳನ್ನು ಪರೀಕ್ಷಿಸಲಾಗಿತ್ತು. ಇದರಲ್ಲಿ ಕೇವಲ ಒಂದು ಮಾದರಿಯು ಮಾತ್ರ ವೈಫಲ್ಯ ಕಂಡಿದ್ದು, ಉಳಿದ 146 ಮಾದರಿಗಳು ಸಂಪೂರ್ಣವಾಗಿ ಉತ್ತಮ ಮಟ್ಟದಲ್ಲಿದ್ದವು. ಈ ಪರೀಕ್ಷೆಗಳು ಆಹಾರ ಸುರಕ್ಷತಾ ಮಾನದಂಡಗಳ ಪ್ರಕಾರ ನಡೆದಿದ್ದು, ಮೊಟ್ಟೆಗಳು ಆರೋಗ್ಯಕ್ಕೆ ಒಳ್ಳೆಯದು ಎಂದು ದೃಢಪಡಿಸಿವೆ ಎಂದರು.

ಮೊಟ್ಟೆಯು ಪೌಷ್ಟಿಕಾಂಶಗಳ ಗಣಿಯಾಗಿದೆ. ಇದರಲ್ಲಿ ಪ್ರೋಟೀನ್, ವಿಟಮಿನ್ ಎ, ಬಿ12, ಡಿ, ಇ, ಮತ್ತು ಮಿನರಲ್‌ಗಳಾದ ಐರನ್, ಸೆಲೆನಿಯಂ ಮುಂತಾದವು ಸಮೃದ್ಧವಾಗಿವೆ. ಇದು ಹೃದಯ ಆರೋಗ್ಯವನ್ನು ಕಾಪಾಡುತ್ತದೆ, ಕಣ್ಣಿನ ಆರೋಗ್ಯಕ್ಕೆ ಸಹಾಯಕವಾಗಿದೆ ಮತ್ತು ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುತ್ತದೆ. ವಿಶೇಷವಾಗಿ ಮಕ್ಕಳು ಮತ್ತು ಗರ್ಭಿಣಿಯರಿಗೆ ಮೊಟ್ಟೆಯು ಅತ್ಯಂತ ಉಪಯುಕ್ತ ಆಹಾರವಾಗಿದೆ. ಸರ್ಕಾರದ ಶಾಲಾ ಮಕ್ಕಳ ಪೌಷ್ಟಿಕ ಯೋಜನೆಗಳಲ್ಲಿ ಮೊಟ್ಟೆಯನ್ನು ಸೇರಿಸಲಾಗಿದೆ. ಏಕೆಂದರೆ ಇದು ಸಸ್ಯಾಹಾರಿ ಮತ್ತು ಮಾಂಸಾಹಾರಿ ಎರಡರಲ್ಲೂ ಸುಲಭವಾಗಿ ಲಭ್ಯವಾಗುವ ಪೌಷ್ಟಿಕ ಆಹಾರ. ಆದರೆ, ಇತ್ತೀಚಿನ ವದಂತಿಗಳಿಂದಾಗಿ ಕೆಲವು ಪೋಷಕರು ಮಕ್ಕಳಿಗೆ ಮೊಟ್ಟೆ ಕೊಡಲು ಹಿಂದೇಟು ಹಾಕುತ್ತಿದ್ದರು.

ಇದೀಗ ಸಚಿವರ ಸ್ಪಷ್ಟನೆಯು ಈ ಆತಂಕವನ್ನು ನಿವಾರಿಸಿದೆ. ಸಾಮಾಜಿಕ ಮಾಧ್ಯಮಗಳಲ್ಲಿ ಹರಡುತ್ತಿರುವ ಈ ವದಂತಿಗಳ ಹಿಂದಿನ ಕಾರಣವೇನು? ಇತ್ತೀಚೆಗೆ ಒಂದು ನಿರ್ದಿಷ್ಟ ಬ್ರ್ಯಾಂಡ್‌ನ ಮೊಟ್ಟೆಗಳಲ್ಲಿ 'ಜೀನೋಟಾಕ್ಸಿಕ್' ಅಂಶಗಳಿರುವುದು ಎಂಬ ವಿಡಿಯೋ ವೈರಲ್ ಆಗಿತ್ತು. ಜೀನೋಟಾಕ್ಸಿಕ್ ಎಂದರೆ ಜೀನ್‌ಗಳನ್ನು ಹಾನಿಗೊಳಪಡಿಸುವ ಅಂಶಗಳು, ಇದು ಕ್ಯಾನ್ಸರ್‌ಗೆ ಕಾರಣವಾಗಬಹುದು ಎಂಬ ಆರೋಪವಿತ್ತು.

ಆದರೆ, ಇದು ಸಂಪೂರ್ಣವಾಗಿ ಆಧಾರರಹಿತವಾಗಿದ್ದು, ವೈಜ್ಞಾನಿಕ ಪರೀಕ್ಷೆಗಳಲ್ಲಿ ದೃಢಪಡಿಸಲಾಗಿದೆ. ಸರ್ಕಾರದ ಆಹಾರ ಮತ್ತು ಔಷಧ ಇಲಾಖೆಯು ನಿರಂತರವಾಗಿ ಮಾರುಕಟ್ಟೆಯಲ್ಲಿನ ಆಹಾರ ಉತ್ಪನ್ನಗಳನ್ನು ಪರೀಕ್ಷಿಸುತ್ತದೆ. ಕಳೆದ ವರ್ಷದ ಪರೀಕ್ಷೆಯಲ್ಲಿ ಕೇವಲ ಒಂದು ಮಾದರಿಯು ಫೇಲ್ ಆಗಿದ್ದು, ಅದು ಕೂಡಾ ಕ್ಯಾನ್ಸರ್ ಕಾರಕ ಅಂಶಕ್ಕೆ ಸಂಬಂಧಿಸಿದ್ದಲ್ಲ. ಇದಲ್ಲದೆ, ಮೊಟ್ಟೆಯ ಸೇವನೆಯ ಸರಿಯಾದ ವಿಧಾನಗಳ ಬಗ್ಗೆಯೂ ಜಾಗೃತಿ ಮೂಡಿಸಬೇಕು. ಮೊಟ್ಟೆಯನ್ನು ಬೇಯಿಸಿ, ಹುರಿದು ಅಥವಾ ಆಮ್ಲೆಟ್ ಮಾಡಿ ಸೇವಿಸಬಹುದು. ಆದರೆ, ಹಸಿ ಮೊಟ್ಟೆ ಸೇವಿಸುವುದು ಸಲ್ಮೋನೆಲ್ಲಾ ಬ್ಯಾಕ್ಟೀರಿಯಾ ಅಪಾಯವನ್ನು ಹೆಚ್ಚಿಸಬಹುದು. ಹೀಗಾಗಿ, ಸರಿಯಾಗಿ ಬೇಯಿಸಿ ಸೇವಿಸುವುದು ಮುಖ್ಯ. ಮೊಟ್ಟೆಯು ಕಡಿಮೆ ಕ್ಯಾಲರಿ ಹೊಂದಿದ್ದು, ತೂಕ ನಿಯಂತ್ರಣಕ್ಕೂ ಸಹಾಯಕವಾಗಿದೆ.

ಸುದ್ದಿ ಹಾಗೂ ಜಾಹೀರಾತುಗಳಿಗೆ ಸಂಪರ್ಕಿಸಿ
:9538786812/988065534

## ರಾಜಕೀಯ ಮಾತುಕತೆ ನಡುವೆ ನಿತಿನ್ ಗಡ್ಕರಿಯೊಂದಿಗೆ ಅಕ್ಕಿ ಉಂಡೆ ಸವಿದ ಪ್ರಿಯಾಂಕಾ ಗಾಂಧಿ



**ನವದೆಹಲಿ:** ಕಾಂಗ್ರೆಸ್ ಸಂಸದೆ ಹಾಗೂ ಕೇರಳದ ವಯನಾಡು ಕ್ಷೇತ್ರದ ಪ್ರತಿನಿಧಿ ಪ್ರಿಯಾಂಕಾ ಗಾಂಧಿ ವಾದ್ರಾ ಅವರು ಕೇಂದ್ರ ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿಯನ್ನು ಭೇಟಿ ಮಾಡಿ, ಕೇರಳದ ರಸ್ತೆ ಅಭಿವೃದ್ಧಿ ಯೋಜನೆಗಳ ಬಗ್ಗೆ ಚರ್ಚೆ ನಡೆಸಿದರು ಈ ಭೇಟಿಯ ಪ್ರಮುಖ ಉದ್ದೇಶ ಕೇರಳ ರಾಜ್ಯದಲ್ಲಿ ನಡೆಯುತ್ತಿರುವ ಹಾಗೂ ಪ್ರಸ್ತಾವನೆಯಲ್ಲಿರುವ ರಾಷ್ಟ್ರೀಯ ಹೆದ್ದಾರಿ ಮತ್ತು ರಸ್ತೆ ಕಾಮಗಾರಿಗಳಿಗೆ ವೇಗ ನೀಡುವಂತೆ ಕೇಂದ್ರ ಸರ್ಕಾರಕ್ಕೆ ಮನವಿ ಮಾಡುವುದಾಗಿತ್ತು.

ಪ್ರಿಯಾಂಕಾ ಗಾಂಧಿ ಅವರು ಕೇರಳದ ಮೂಲಕ ಹಾದುಹೋಗುವ ಆರು ಪ್ರಮುಖ ರಸ್ತೆ ಯೋಜನೆಗಳ ಕುರಿತು ಗಡ್ಕರಿಯವರ ಗಮನ ಸೆಳೆದರು. ಈ ಯೋಜನೆಗಳು ರಾಜ್ಯದ ಜನಜೀವನ, ವ್ಯಾಪಾರ ಮತ್ತು ಪ್ರವಾಸೋದ್ಯಮಕ್ಕೆ ಅತ್ಯಂತ ಅಗತ್ಯವಾಗಿವೆ ಎಂದು ಅವರು ವಿವರಿಸಿದರು. ಈ ಸಂದರ್ಭದಲ್ಲಿ ಪ್ರತಿಕ್ರಿಯಿಸಿದ ನಿತಿನ್ ಗಡ್ಕರಿ, ಕೆಲವು ಯೋಜನೆಗಳು ಕೇರಳ ಸರ್ಕಾರದ ವ್ಯಾಪ್ತಿಗೆ ಒಳಪಟ್ಟಿರುವುದರಿಂದ ಕೇಂದ್ರ ಸರ್ಕಾರ ನೇರವಾಗಿ ಹಸ್ತಕ್ಷೇಪ ಮಾಡಲು ಸಾಧ್ಯವಿಲ್ಲ ಎಂದು ಸ್ಪಷ್ಟಪಡಿಸಿದರು. ಆದರೆ ಕೇಂದ್ರದ ಅಧೀನದಲ್ಲಿರುವ ಉಳಿದ ಯೋಜನೆಗಳನ್ನು ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು. ಚರ್ಚೆಯ ನಡುವೆ ತುಸು ವಿರಾಮ ನೀಡಿದ ಗಡ್ಕರಿ, ಹಾಸ್ಯಮಯ ಮಾತೊಂದನ್ನು ಆಡಿದರು. "ಇತ್ತೀಚೆಗೆ ನಿಮ್ಮ ಸಹೋದರ, ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಕೂಡಾ ತಮ್ಮ ಕ್ಷೇತ್ರ ರಾಯ್ ಬರೇಲಿಯ ರಸ್ತೆ ಸಮಸ್ಯೆಗಳ ಬಗ್ಗೆ ನನ್ನನ್ನು ಭೇಟಿ ಮಾಡಿದ್ದರು" ಎಂದು ಹೇಳಿದರು. "ಭಾಯಿಯ ಕೆಲಸ ಮಾಡಿಕೊಟ್ಟಿದ್ದೇನೆ. ಆದರೆ ಬೆಹೆಣಿಯ ಕೆಲಸ ಮಾಡಿಕೊಡದೇ ಇದ್ದರೆ ನೀವು ಖಂಡಿತ ದೂರು ನೀಡುತ್ತೀರಿ" ಎಂದು ವ್ಯಂಗ್ಯವಾಡಿದರು.

ಈ ಮಾತು ಕೇಳುತ್ತಿದ್ದಂತೆಯೇ ಪ್ರಿಯಾಂಕಾ ಗಾಂಧಿ ಸೇರಿದಂತೆ ಅಲ್ಲಿದ್ದ ಎಲ್ಲರೂ ನಗೆಗಡಲಲ್ಲಿ ತೇಲಿದರು. ಈ ಸಭೆಯಲ್ಲಿ ರಾಜಕೀಯ ಮಾತ್ರವಲ್ಲ, ಪಾಕಶಾಲೆಯ ವಿಷಯವೂ ಚರ್ಚೆಗೆ ಬಂದಿತ್ತು. ಗಡ್ಕರಿಯವರ ಕಚೇರಿಯಲ್ಲಿ ಇತ್ತೀಚೆಗೆ ಕೆಲವು ಯೂಟ್ಯೂಬ್ ಅಡುಗೆ ವೀಡಿಯೊಗಳನ್ನು ನೋಡಿ ಹೊಸ ರೀತಿಯ ಅಕ್ಕಿ ಖಾದ್ಯವನ್ನು ತಯಾರಿಸಲಾಗಿತ್ತು. ಆ ದಿನ ಗಡ್ಕರಿ ಕಚೇರಿಗೆ ಭೇಟಿ ನೀಡಿದ ಎಲ್ಲ ಅತಿಥಿಗಳಿಗೆ ಅಕ್ಕಿ ಉಂಡೆಗಳೊಂದಿಗೆ ಚಟ್ನಿಯನ್ನೂ ಬಡಿಸಲಾಯಿತು.

ಪ್ರಿಯಾಂಕಾ ಗಾಂಧಿ ಭೇಟಿ ನೀಡಿದಾಗ, ಗಡ್ಕರಿ ಅವರು ಹೊಸ ಖಾದ್ಯವನ್ನು ಸವಿಯಲೇಬೇಕು ಎಂದು ಒತ್ತಾಯಿಸಿದರು. ಸಚಿವರ ಆತಿಥ್ಯಕ್ಕೆ ಮಣಿದ ಪ್ರಿಯಾಂಕಾ ವಾದ್ರಾ, ಕಾಂಗ್ರೆಸ್ ನಾಯಕ ದೀಪೇಂದರ್ ಸಿಂಗ್ ಹೂಡಾ ಸೇರಿದಂತೆ ಇತರರೊಂದಿಗೆ ಕುಳಿತು ಅಕ್ಕಿ ಉಂಡೆಗಳ ರುಚಿಯನ್ನು ಆಸ್ವಾದಿಸಿದರು. ಈ ವೇಳೆ ರಾಜಕೀಯ ಚರ್ಚೆಯ ಜೊತೆಗೆ ಆಹಾರದ ರುಚಿಯ ಬಗ್ಗೆ ಮಾತುಕತೆ ನಡೆಯಿತು. ಈ ಸಂಪೂರ್ಣ ಘಟನೆಯ ವೀಡಿಯೊ ಇದೀಗ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ.

## 'ನನ್ನ ಮತ್ತು ಸಿದ್ದರಾಮಯ್ಯ ನಡುವೆ ಒಪ್ಪಂದ ಆಗಿದೆ': ಡಿಕೆ ಶಿವಕುಮಾರ್



**ಕಾರವಾರ:** ರಾಜ್ಯ ರಾಜಕಾರಣದಲ್ಲಿ ಮತ್ತೆ ಮುಖ್ಯಮಂತ್ರಿ ಕುರ್ಚಿ ವಿಚಾರ ಭಾರೀ ಚರ್ಚೆಗೆ ಗ್ರಾಸವಾಗಿದೆ. ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೊಂದಿಗೆ ಒಪ್ಪಂದ ಮಾಡಿಕೊಂಡಿದ್ದೇವೆ ಮತ್ತು ಅದನ್ನು ಹೈಕಮಾಂಡ್ ಮುಂದೆ ಒಟ್ಟಾಗಿ ಒಪ್ಪಿಸಿದ್ದೇವೆ ಎಂದು ಸಂಚಲನ ಹೇಳಿಕೆ ನೀಡಿದ್ದಾರೆ. ಉತ್ತರ ಕನ್ನಡ ಜಿಲ್ಲೆಯ ಅಂಕೋಲಾ ತಾಲೂಕಿನ ಆಂಡ್ಲೇ ಜಗದೀಶ್ವರಿ ಅಮ್ಮನವರ ದೇವಸ್ಥಾನಕ್ಕೆ ಭೇಟಿ ನೀಡಿದ ನಂತರ ಮಾತನಾಡಿದ ಡಿಕೆಶಿ, "ಸಿದ್ದರಾಮಯ್ಯ ಅವರು ನಾನೇ ಐದು ವರ್ಷ ಮುಖ್ಯಮಂತ್ರಿ ಎಂದು ಹೇಳುತ್ತಿದ್ದಾರೆ.


ಆದರೆ ನನ್ನ ಮತ್ತು ಸಿದ್ದರಾಮಯ್ಯ ಅವರ ನಡುವೆ ಒಪ್ಪಂದವಿದೆ. ನಾವಿಬ್ಬರೂ ಒಟ್ಟಾಗಿ ಮಾತುಕತೆ ನಡೆಸಿ, ಹೈಕಮಾಂಡ್ ಅನ್ನು ಒಪ್ಪಿಸಿದ್ದೇವೆ. ಕಾಂಗ್ರೆಸ್ ಹೈಕಮಾಂಡ್ ಸೂಚನೆಯಂತೆಯೇ ನಾವು ಒಟ್ಟಾಗಿ ಸಾಗುತ್ತೇವೆ" ಎಂದು ತಿಳಿಸಿದರು. "ಸಿದ್ದರಾಮಯ್ಯ ಅವರು ಐದು ವರ್ಷ ಮುಖ್ಯಮಂತ್ರಿಯಾಗಿ ಅವಧಿ ಪೂರ್ಣಗೊಳಿಸುವುದಿಲ್ಲ ಎಂದು ನಾನು ಎಂದೂ ಹೇಳಿಲ್ಲ. ಹೈಕಮಾಂಡ್ ಅವರ ಪರವಾಗಿದ್ದ ಕಾರಣ ಅವರು ಮುಖ್ಯಮಂತ್ರಿ ಆಗಿದ್ದಾರೆ. ನಾವಿಬ್ಬರೂ ಒಟ್ಟಾಗಿ ಕೆಲಸ ಮಾಡುತ್ತೇವೆ" ಎಂದು ಡಿ.ಕೆ ಶಿವಕುಮಾರ್ ಸ್ಪಷ್ಟಪಡಿಸಿದರು. ಜೊತೆಗೆ, ಐದು ವರ್ಷಗಳ ಹಿಂದೆ ಈ ದೇವಸ್ಥಾನಕ್ಕೆ ಬಂದು ಪ್ರಾರ್ಥಿಸಿದ್ದೆ. ಆ ಪ್ರಾರ್ಥನೆ ಫಲಿಸಿತು

ಈಗ ಮತ್ತೆ ಬಂದು ದೇವಿಯ ಆಶೀರ್ವಾದ ಪಡೆದಿದ್ದೇನೆ ಎಂದು ಭಾವುಕವಾಗಿ ಹೇಳಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಈ ಹಿಂದೆಯೇ "ಎರಡೂವರೆ ವರ್ಷದ ಅಧಿಕಾರ ಹಂಚಿಕೆ ಒಪ್ಪಂದ ಏನೂ ಇಲ್ಲ. ನಾನು ಐದು ವರ್ಷ ಪೂರ್ತಿ ಮುಖ್ಯಮಂತ್ರಿಯಾಗಿರುತ್ತೇನೆ" ಎಂದು ಸ್ಪಷ್ಟಪಡಿಸಿದ್ದರು. ವಿಧಾನಸಭೆಯಲ್ಲಿ ಕೂಡ ಈ ವಿಚಾರಕ್ಕೆ ಉತ್ತರಿಸಿದ್ದ ಸಿದ್ದರಾಮಯ್ಯ, ಹೈಕಮಾಂಡ್ ಆದೇಶಿಸುವವರೆಗೂ ತಾನು ಮುಖ್ಯಮಂತ್ರಿ ಆಗಿರುತ್ತೇನೆ ಎಂದು ಹೇಳಿದ್ದರು.

## ರಾಜ್ಯಸಭಾ ಸದಸ್ಯೆ ಸುಧಾ ಮೂರ್ತಿಗೂ ತಲುಪಿದ ಡೀಪ್‌ಫೇಕ್ ವಂಚನೆ

**ನವದೆಹಲಿ:** ನಟ, ನಟಿಯರನ್ನು ಕಾಡುತ್ತಿದ್ದ ಡೀಪ್ ಫೇಕ್ ಬಿಸಿ ಈಗ ರಾಜ್ಯಸಭಾ ಸದಸ್ಯೆ ಸುಧಾ ಮೂರ್ತಿ ಅವರಿಗೂ ತಟ್ಟಿದೆ. ಹೂಡಿಕೆ ಹಗರಣ ಸಂಬಂಧ ತಮ್ಮ ಡೀಪ್ ಫೇಕ್ ವಿಡಿಯೋ ಸೋಷಿಯಲ್ ಮೀಡಿಯಾದಲ್ಲಿ ಹರಿದಾಡುತ್ತಿದ್ದು, ಈ ಬಗ್ಗೆ ಸ್ಪಷ್ಟನೆ ನೀಡಿದ್ದಾರೆ. ದೆಹಲಿಯ ಸಂಸತ್ ಭವನ ಆವರಣದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿರುವ ಅವರು, ಎಐ ದುರ್ಬಳಕೆ ಮಾಡಿಕೊಂಡು ನಕಲಿ ವಿಡಿಯೋ ಸೃಷ್ಟಿಸಲಾಗಿದೆ.

ಎಲ್ಲಾ ಹೂಡಿಕೆದಾರರಿಗೆ ನಾನು ಹೇಳೋದೇನಂದ್ರೆ, ಯಾವುದೇ ಸಮಯದಲ್ಲೂ ನಾನು ಹೂಡಿಕೆ ಬಗ್ಗೆ ಮಾತನಾಡಲ್ಲ. ಹೂಡಿಕೆ ವಿಚಾರದಲ್ಲಿ ನನ್ನ ಮುಖ ಎಂದಿಗೂ ನೀವು ನೋಡಲ್ಲ. ನೀವು ನೋಡಿದ್ದರೆ, ಅದು ಖಂಡಿತಾ ನಕಲಿ ವಿಡಿಯೋ ಅಂತಾ ಹೇಳಿದ್ದಾರೆ. ನೀವು ಕಷ್ಟಪಟ್ಟು ಸಂಪಾದಿಸಿದ ಹಣ ಹೂಡಿಕೆ ಮಾಡುವ ಮುನ್ನ ಯೋಚಿಸಿ. ಬ್ಯಾಂಕುಗಳಲ್ಲಿ ಆ ಖಾತೆ ಅಥವಾ ಯೋಜನೆಯ ಬಗ್ಗೆ ಖಚಿತಪಡಿಸಿಕೊಳ್ಳಿ, ನಂತರ ಹೂಡಿಕೆ ಮಾಡಿ. ಆದ್ರೆ ನನ್ನ ವಿಷಯದಲ್ಲಿ ಆ ರೀತಿ ಇರೋದಿಲ್ಲ. ಹಣದ ಹೂಡಿಕೆ ಕುರಿತು ವಿಡಿಯೋದಲ್ಲಿ ನನ್ನ ಮುಖ ನೋಡಿದ್ದೀರಿ ಅಥವಾ ಧ್ವನಿ ಕೇಳಿದ್ದೀರಿ ಅಂದ್ರೆ, ಖಂಡಿತಾ ಅದು ನಕಲಿ ಸುದ್ದಿ ಅಂತ ಸ್ಪಷ್ಟಪಡಿಸಿದ್ದಾರೆ. ಸೈಬರ್ ವಂಚಕನ ಕರೆ ಬಂದಿತ್ತು ಕೆಲ ದಿನಗಳ ಹಿಂದಷ್ಟೇ ಸುಧಾ ಮೂರ್ತಿ ಅವರಿಗೆ ದೂರವಾಣಿ ಕರೆ ಮಾಡಿದ್ದ ಸೈಬರ್ ವಂಚಕರು ವಂಚಿಸಲು ಯತ್ನಿಸಿದ ಘಟನೆ ನಡೆದಿತ್ತು.



ಈ ಕುರಿತು ಸಿಸಿಬಿ ಸೈಬರ್ ಠಾಣೆಯಲ್ಲಿ ಕೇಸ್ ಕೂಡ ದಾಖಲಾಗಿದೆ. ಸೆಪ್ಟೆಂಬರ್ 9 ರಂದು ಸುಧಾಮೂರ್ತಿ ಅವರಿಗೆ ಅಪರಿಚಿತ ನಂಬರ್‌ನಿಂದ ಕರೆ ಮಾಡಿದ್ದ ವ್ಯಕ್ತಿ, ತಾನು ದೂರ ಸಂಪರ್ಕ ಇಲಾಖೆ (ಟೆಲಿಕಾಂ) ಉದ್ಯೋಗಿ ಎಂದು ಪರಿಚಯಿಸಿಕೊಂಡಿದ್ದ. ನಿಮ್ಮ ಹೆಸರಿನಲ್ಲಿ ಬೇರೆಯವರು ಸಿಮ್ ಖರೀದಿಸಿದ್ದು, ಅಕ್ರಮ ಚಟುವಟಿಕೆಗಳಿಗೆ ಬಳಕೆ ಮಾಡಲಾಗುತ್ತಿದೆ. ಹೀಗಾಗಿ, ನಿಮ್ಮ ವೈಯಕ್ತಿಕ ಮಾಹಿತಿ ನೀಡಿಎಂದಿದ್ದ. ಮಾಹಿತಿ ನೀಡದಿದ್ದರೆ ಈಗ ಬಳಕೆ ಮಾಡುತ್ತಿರುವ ಸಿಮ್ ಸಂಪರ್ಕ ಕಡಿತಗೊಳಿಸಲಾಗುತ್ತದೆ ಎಂದು ಎಚ್ಚರಿಕೆ ನೀಡಿದ್ದ. ಸೈಬರ್ ವಂಚಕರ ಕೃತ್ಯ ಎಂದು ಎಚ್ಚೆತ್ತ ಸುಧಾಮೂರ್ತಿ ಕರೆ ಸ್ಥಗಿತಗೊಳಿಸಿದ್ದರು. ಜತೆಗೆ, ಸೈಬರ್ ಸಹಾಯವಾಣಿ 1930ಕ್ಕೆ ಕರೆ ಮಾಡಿ ದೂರು ನೀಡಿದ್ದರು.

ಬಳಿಕ ಠಾಣೆಯಲ್ಲೂ ದೂರು ನೀಡಿದ್ದರು ಯಾರದ್ದೋ ದೇಹಕ್ಕೆ ಯಾರದ್ದೋ ತಲೆಯನ್ನು ಫೋಟೋ ಎಡಿಟಿಂಗ್ ಟೂಲ್ ಮೂಲಕ ಜೋಡಿಸುವುದು ಹಳೇಯ ವಿಚಾರ. ಈ ಫೋಟೋಗಳನ್ನು ನೋಡುವಾಗ ಸ್ವಲ್ಪವಾದರೂ ಅನುಮಾನ ಬರುತ್ತದೆ. ಆದರೆ ಡೀಪ್ ಫೇಕ್ ತಂತ್ರಜ್ಞಾನದಲ್ಲಿ ಯಾವುದೇ ಅನುಮಾನ ಬಾರದಂತೆ ಫೋಟೋ ಅಲ್ಲ ವಿಡಿಯೋವನ್ನೇ ಸೃಷ್ಟಿ ಮಾಡಲಾಗುತ್ತದೆ. ವಿಡಿಯೋ ಎಷ್ಟು ನೈಜತೆ ಇರುತ್ತದೆ ಅಂದರೆ ವ್ಯಕ್ತಿಯ ದೇಹಕ್ಕೂ ಮತ್ತು ಮುಖಕ್ಕೆ ನೇರ ಸಂಬಂಧ ಇದ್ದಂತೆ ಇರುತ್ತದೆ. ಮೂಲ ವಿಡಿಯೋ ಬೇರೆ ಆಗಿದ್ದರೂ ಈ ವ್ಯಕ್ತಿಯೇ ವಿಡಿಯೋದಲ್ಲಿ ನಟಿಸುತ್ತಿದ್ದಂತೆ ಬಿಂಬಿಸಲಾಗುತ್ತದೆ.

## ಮುಸ್ಲಿಮರು ಸೂರ್ಯ ನಮಸ್ಕಾರ ಮಾಡಿದ್ರೆ ತಪ್ಪೇನಿಲ್ಲ: RSS ಹೊಸಬಾಳೆ

ರಾಷ್ಟ್ರೀಯ ಸ್ವಯಂಸೇವಕ ಸಂಘದ (RSS) ಸರ್ಕಾರ್ಯವಾಹ ದತ್ತಾತ್ರೇಯ ಹೊಸಬಾಳೆ ಅವರು ಭಾರತೀಯ ಸಂಸ್ಕೃತಿಯಲ್ಲಿ ಪ್ರಕೃತಿ ಪೂಜೆಯ ಮಹತ್ವವನ್ನು ಒತ್ತಿ ಹೇಳುತ್ತಾ, ಮುಸ್ಲಿಮರು ಸೂರ್ಯ ನಮಸ್ಕಾರ ಮಾಡುವುದು ಅಥವಾ ನದಿ-ಸೂರ್ಯನನ್ನು ಪೂಜಿಸುವುದು ಯಾವುದೇ ಧರ್ಮಕ್ಕೆ ಹಾನಿಯಾಗದ ವೈಜ್ಞಾನಿಕ ಮತ್ತು ಪರಿಸರ ಸ್ನೇಹಿ ಅಭ್ಯಾಸ ಎಂದು ಅಭಿಪ್ರಾಯಪಟ್ಟಿದ್ದಾರೆ. ಉತ್ತರ ಪ್ರದೇಶದ ಗೋರಖಪುರದಲ್ಲಿ ನಡೆದ 'ಹಿಂದೂ ಸಮ್ಮೇಳನ'ದಲ್ಲಿ ಮಾತನಾಡಿದ ಅವರು, ಭಾರತೀಯ ಸಂಸ್ಕೃತಿಯು ಧರ್ಮಗಳನ್ನು ಮೀರಿ ಪ್ರಕೃತಿ ಸಂರಕ್ಷಣೆಯನ್ನು ಒತ್ತಿಹೇಳುತ್ತದೆ ಎಂದರು.

ಹೊಸಬಾಳೆ ಅವರು ಹೇಳಿದಂತೆ, "ಭಾರತೀಯ ಸಂಸ್ಕೃತಿಯಲ್ಲಿ ನದಿ, ವೃಕ್ಷ, ಸೂರ್ಯನನ್ನು ಪೂಜಿಸುವುದು ಪರಿಸರ ಸಂರಕ್ಷಣೆಯ ಭಾಗವಾಗಿದೆ. ನಮಾಜ್ ಮಾಡುವ ನಮ್ಮ ಮುಸ್ಲಿಂ ಸಹೋದರರು ಪರಿಸರದ ಹಿತಕ್ಕಾಗಿ ನದಿ ಅಥವಾ ಸೂರ್ಯನನ್ನು ಪೂಜಿಸಿದರೆ ಏನು ತಪ್ಪಾಗುತ್ತದೆ? ಸೂರ್ಯ ನಮಸ್ಕಾರ ಒಂದು ವೈಜ್ಞಾನಿಕ ಮತ್ತು ಆರೋಗ್ಯಕರ ಅಭ್ಯಾಸ. ಅದನ್ನು ಮಾಡುವುದರಿಂದ ಯಾರಿಗೂ ಹಾನಿಯಾಗುವುದಿಲ್ಲ, ಬದಲಿಗೆ ಲಾಭವೇ ಆಗುತ್ತದೆ. ಪ್ರಾಣಾಯಾಮ ಅಥವಾ ಯೋಗ ಮಾಡುವುದನ್ನು ಕೇವಲ ಒಂದು ಧರ್ಮಕ್ಕೆ ಸೀಮಿತಗೊಳಿಸಬಾರದು. ಇದು ಜಗತ್ತಿಗೆ ಭಾರತದ ಕೊಡುಗೆ." ಅವರು ಮುಂದುವರಿದು, ಹಿಂದೂ ಧರ್ಮವನ್ನು 'ಮಾನವ ಧರ್ಮ' ಎಂದು ಕರೆದು, ಅದು ಶ್ರೇಷ್ಠವಾದದ್ದು ಮತ್ತು ಸಾರ್ವತ್ರಿಕ ಮೌಲ್ಯಗಳನ್ನು ಒಳಗೊಂಡಿದೆ ಎಂದರು. ಭಾರತದ ಪೂರ್ವಜರು ಪ್ರಕೃತಿಯನ್ನು ಪೂಜಿಸುವ ಮೂಲಕ ಅರಣ್ಯ, ನೀರು, ಪ್ರಾಣಿ ಸಂರಕ್ಷಣೆಯನ್ನು ಆಚರಿಸಿದ್ದರು. ಇಂದು ಪರಿಸರ ಸಮಸ್ಯೆಗಳು ಹೆಚ್ಚುತ್ತಿರುವಾಗ ಈ ಸಂಪ್ರದಾಯಗಳನ್ನು ಎಲ್ಲರೂ ಅನುಸರಿಸಬೇಕು ಎಂದು ಒತ್ತಾಯಿಸಿದರು.

ಹೊಸಬಾಳೆ ಅವರು ವಿಶ್ವದಲ್ಲಿ ಭಾರತೀಯ ಸಂಸ್ಕೃತಿಯ ಬೇಡಿಕೆಯನ್ನು ಉದಾಹರಿಸಿ, "ಅಮೆರಿಕಾ, ರಷ್ಯಾ ಸೇರಿದಂತೆ ವಿದೇಶಗಳಲ್ಲಿ ಹಿಂದೂ ದೇವಾಲಯಗಳು ನಿರ್ಮಾಣವಾಗುತ್ತಿವೆ. ಅಲ್ಲಿ ಜನರು ಸೂರ್ಯ ನಮಸ್ಕಾರ ಮತ್ತು ಪ್ರಾಣಾಯಾಮ ಅಭ್ಯಾಸ ಮಾಡುತ್ತಿದ್ದಾರೆ. ಭಾರತವು ಸಂಸ್ಕೃತಿ ಮತ್ತು ಜ್ಞಾನದಲ್ಲಿ ವಿಶ್ವಗುರು ಆಗಬೇಕು" ಎಂದರು.

## ಸ್ಪೀಕರ್ ಬಿರ್ಲಾ ಕೊಠಡಿಯಲ್ಲಿ ಸಭೆ; ಮೋದಿ ಮಾತಿಗೆ ನಕ್ಕ ವಿಪಕ್ಷ ಸದಸ್ಯರು



**ನವದೆಹಲಿ:** ಚಳಿಗಾಲದ ಅಧಿವೇಶನ ಮುಕ್ತಾಯವಾದ ಹಿನ್ನೆಲೆಯಲ್ಲಿ ಇಂದು ಸ್ಪೀಕರ್ ಓಂ ಬಿರ್ಲಾ ಅವರು ತಮ್ಮ ಕೊಠಡಿಯಲ್ಲಿ ಆಡಳಿತ ಮತ್ತು ವಿಪಕ್ಷಗಳ ಸದಸ್ಯರ ಜೊತೆ ಸಭೆ ನಡೆಸಿದರು. ಈ ಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ರಕ್ಷಣಾ ಸಚಿವ ರಾಜನಾಥ್ ಸಿಂಗ್, ಕಾಂಗ್ರೆಸ್ ಸಂಸದೆ ಪ್ರಿಯಾಂಕಾ ಗಾಂಧಿ ಸಮಾಜವಾದಿ ಪಕ್ಷದ ಧರ್ಮೇಂದ್ರ ಯಾದವ್, ಎನ್‌ಸಿಪಿ (ಎಸ್‌ಪಿ)ಯ ಸುಪ್ರಿಯಾ ಸುಳೆ ಮತ್ತು ಸಿಪಿಐ ನಾಯಕ ಡಿ ರಾಜಾ ಸೇರಿದಂತೆ ಹಲವು ವಿಪಕ್ಷಗಳ ಸದಸ್ಯರು ಭಾಗಿಯಾಗಿದ್ದರು. ಈ ಬಗ್ಗೆ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ ಸ್ಪೀಕರ್ ಓಂ ಬಿರ್ಲಾ, 18ನೇ ಲೋಕಸಭೆಯ ಆರನೇ ಅಧಿವೇಶನ ಮುಗಿದ ನಂತರ ಸಂಸತ್ತಿನ ಕಟ್ಟಡದಲ್ಲಿರುವ ಕಚೇರಿಯಲ್ಲಿ ಗೌರವಾನ್ವಿತ ಪ್ರಧಾನಿ ನರೇಂದ್ರ ಮೋದಿ ಮತ್ತು ಎಲ್ಲಾ ಪಕ್ಷಗಳ ಗೌರವಾನ್ವಿತ ನಾಯಕರೊಂದಿಗೆ ಸೌಹಾರ್ದಯುತ ಮಾತುಕತೆ ನಡೆಯಿತು ಎಂದು ಬರೆದಿಕೊಂಡಿದ್ದಾರೆ.ಮಾತುಕತೆಯ ವೇಳೆ ಪ್ರಿಯಾಂಕಾ ಗಾಂಧಿಯವರು ಅಲರ್ಜಿಯನ್ನು ತಡೆಗಟ್ಟಲು ತಮ್ಮ ಕ್ಷೇತ್ರವಾದ ವಯನಾಡಿನ ಗಿಡಮೂಲಿಕೆಯನ್ನು ಸೇವಿಸುವುದಾಗಿ ಸಂಸದರೊಂದಿಗೆ ಹಂಚಿಕೊಂಡರು.

ಪ್ರಧಾನಿಯವರ ಇತ್ತೀಚಿನ ಇಥಿಯೋಪಿಯಾ, ಜೋರ್ಡಾನ್ ಮತ್ತು ಓಮನ್ ಪ್ರವಾಸದ ಬಗ್ಗೆಯೂ ಕಾಂಗ್ರೆಸ್ ನಾಯಕರು ವಿಚಾರಿಸಿದರು. ಪ್ರವಾಸ ಚೆನ್ನಾಗಿತ್ತು ಎಂದು ಪ್ರಧಾನಿ ಉತ್ತರಿಸಿದರು.ಮಾತುಕತೆಯ ವೇಳೆ ಅಧಿವೇಶನವನ್ನು ಮತ್ತಷ್ಟು ದಿನ ನಡೆಸಬಹುದಿತ್ತು ಎಂದು ಧರ್ಮೇಂದ್ರ ಯಾದವ್ ಹೇಳಿದರು. ಈ ವೇಳೆ ಮೋದಿ, ನಿಮ್ಮ ಗಂಟಲಿಗೆ ನೋವಾಗಬಾರದು ಎಂಬ ಕಾರಣಕ್ಕೆ ಅಧಿವೇಶದ ಸಮಯವನ್ನು ಕಡಿಮೆ ಮಾಡಲಾಗಿತ್ತು ಎಂದು ತಮಾಷೆಯಾಗಿ ಹೇಳಿದರು. ಈ ವೇಳೆ ಸದನದಲ್ಲಿ ಯಾದವ್, ಎನ್‌ಕೆ ಪ್ರೇಮಚಂದ್ರನ್ ಸೇರಿದಂತೆ ಕೆಲವು ವಿರೋಧ ಪಕ್ಷದ ಸಂಸದರು ಸದನಕ್ಕೆ ಚೆನ್ನಾಗಿ ಸಿದ್ಧರಾಗಿ ಬಂದು ಚರ್ಚೆಯಲ್ಲಿ ಭಾಗಿಯಾಗಿದ್ದಕ್ಕೆ ಪ್ರಧಾನಿ ಅವರನ್ನು ಶ್ಲಾಘಿಸಿದರು. ಕೆಲವು ವಿರೋಧ ಪಕ್ಷದ ನಾಯಕರು, ಹಳೆಯ ಕಟ್ಟಡದಲ್ಲಿರುವಂತೆಯೇ ಹೊಸ ಸಂಸತ್ ಕಟ್ಟಡದಲ್ಲಿ ಸಂಸದರಿಗಾಗಿ ಕೇಂದ್ರ ಸಭಾಂಗಣವನ್ನು ಸೇರಿಸಬೇಕು. ಅಲ್ಲಿ ಸಂಸದರು ಮತ್ತು ಮಾಜಿ ಸಂಸದರು ಹೆಚ್ಚಾಗಿ ಚರ್ಚೆಗಾಗಿ ಸೇರುತ್ತಾರೆ. ಹೀಗಾಗಿ ಕೇಂದ್ರ ಸಭಾಂಗಣವನ್ನು ಸೇರಿಸಬೇಕು ಎಂದು ಒತ್ತಾಯ ಮಾಡಿದರು.

ಇದಕ್ಕೆ ಮೋದಿ, ಅದು ನಿವೃತ್ತಿಯಾದ ನಂತರದ ಕೆಲಸ. ನೀವು ಇನ್ನೂ ಸಾಕಷ್ಟು ಸೇವೆ ಸಲ್ಲಿಸಬೇಕಿದೆ ಎಂದು ಹೇಳಿದಾಗ ಸಂಸದರ ಮುಖದಲ್ಲಿ ನಗುವನ್ನು ತರಿಸಿತು ಎಂದು ವರದಿಯಾಗಿದೆ. ಪ್ರತಿ ಅಧಿವೇಶನ ಮುಗಿದ ಬಳಿಕ ಸ್ಪೀಕರ್ ತಮ್ಮ ಕೊಠಡಿಯಲ್ಲಿ ಟೀ ಪಾರ್ಟಿ ಆಯೋಜಿಸುತ್ತಾರೆ. ಮಳೆಗಾಲದ ಅಧಿವೇಶನದ ಕೊನೆಯಲ್ಲಿ ರಾಹುಲ್ ಗಾಂಧಿ ಜೊತೆಗೆ ಇತರ ವಿರೋಧ ಪಕ್ಷದ ನಾಯಕರು ಸ್ಪೀಕರ್ ಆಯೋಜಿಸಿದ್ದ ಟೀ ಪಾರ್ಟಿಯನ್ನು ಬಹಿಷ್ಕರಿಸಿದ್ದರು. ಸ್ಪೀಕರ್ ವಿರೋಧ ಪಕ್ಷದ ಸಂಸದರಿಗೆ ಸದನದಲ್ಲಿ ಮಾತನಾಡಲು ಅವಕಾಶ ನೀಡಿಲ್ಲ ಎಂಬ ಕಾರಣ ನೀಡಿ ಬಹಿಷ್ಕಾರ ಹಾಕಿದ್ದರು.19 ದಿನಗಳ ಚಳಿಗಾಲದ ಅಧಿವೇಶನ ಔಪಚಾರಿಕವಾಗಿ ಮುಕ್ತಾಯಗೊಂಡಿದ್ದು ಹಲವಾರು ಪ್ರಮುಖ ಮಸೂದೆಗಳನ್ನು ಅಂಗೀಕರಿಸಲಾಗಿದೆ. ಲೋಕಸಭೆ ಶೇ. 111 ರಷ್ಟು ಉತ್ಪಾದಕತೆಯನ್ನು ದಾಖಲಿಸಿದೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.